ಸಂಪುಟ : 8 ಸಂಚಿಕೆ : 173 ಪುಟ : 4 ಬೆಲೆ : 3.00 ಶನಿವಾರ ಆಗಸ್ಟ್ 12, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 8 Issue : 173 Pages : 4 Price : 3.00 Saturday August 12, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ನೀರು ಪೂರೈಕೆಯ ಮಾಹಿತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದಲ್ಲಿ ಶನಿವಾರ ನೀರು ಪೂರೈಕೆಯಾಗುವ ಸ್ಥಳಗಳ ಮಾಹಿತಿ ಹೀಗಿದೆ.

ವಾರ್ಡ್ ನಂ.1ರ ಎಸ್ ಎಮ್ ಕೃಷ್ಣಾ ನಗರ, ವಾರ್ಡ್ ನಂ.16, 21ರ ಗುಡದೂರ ಸ್ವಾಮಿ ಲೈನ್, ಎಡಭಾಗ-ಬಲಭಾಗ, ಗಂಗಿಮಡಿ ಹೊಸ ಲೈನ್, ಕುಂಬೇಶ್ವರ ನಗರ, ಶೇಖಪ್ಪ ಲೈನ್, ಕುಷ್ಟರೋಗ ಭಾಗ-1, 2, ಕುಂಬಾರ ಓಣಿ, ವಾರ್ಡ್ ನಂ.23ರ ಕುಂಬಾರ ಓಣಿ, ಜಂತ್ಲಿಯವರ ಲೈನ್, ವಾರ್ಡ್ ನಂ.20ರ ಬೇವಿನಮರದಮ್ಮ ಲೈನ್, ಭಾಗ-1, 2, ಹುಲಿಗೆಮ್ಮ ದೇವರಗುಡಿ ಲೈನ್, ಖಾನತೋಟ, ಗೌಳಿಯವರ ಲೈನ್, ಗಚ್ಚಿಯವರ ಲೈನ್, ದೊಡ್ಡಮನಿಯರ ಲೈನ್, ಪರಶುರವರ ಲೈನ್, ಶರೀಪ್ಪಜ್ಜನ ಲೈನ್, ಮುಂಡರಗಿಯವರ ಲೈನ್, ತೆರದಾಳ ಲೈನ್, ಅಂಬೇಡ್ಕರ



ನಗರ, ವಾರ್ಡ್ ನಂ.33ರ ಜಾಕೀರ ಹುಸೇನ ಕಾಲೋನಿಯ ಭಾಗಗಳು, ವಾರ್ಡ್ ನಂ.28ರ ಸೊಲ್ಲಾಪಟ್ಟಿ ಅವರ ಲೈನ್, ಕೃಷ್ಣಾ ಟ್ಯೂಷನ್ ಲೈನ್, ವಾರ್ಡ್ ನಂ.29ರ ಬಾಂಡಗೆ ಲೈನ್, ಮಸೀದಿ ಲೈನ್‌ಗಳಲ್ಲಿ ನೀರು ಪೂರೈಕೆಯಾಗಲಿದೆ.

ತಾಂತ್ರಿಕ ಕಾರಣಗಳಿಂದ ನೀರು ಪೂರೈಕೆಯಲ್ಲಿ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

### 200 ಆಸನಗಳ ಸಾಮರ್ಥ್ಯದ ಸಭಾಂಗಣ ಉದ್ಘಾಟಿಸಿದ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ.ಪಾಟೀಲ

## ಶೀಘ್ರದಲ್ಲೇ ಹೊಸ ಪ್ರವಾಸೋದ್ಯಮ ನೀತಿ ಜಾರಿ

■ ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ

ಒಂದು ತಿಂಗಳ ಒಳಗಾಗಿ ರಾಜ್ಯದಲ್ಲಿ ಹೊಸ ಪ್ರವಾಸೋದ್ಯಮ ನೀತಿ ಜಾರಿಯಾಗಲಿದೆ ಎಂದು ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ಅವರು ಶುಕ್ರವಾರ ಚಿಕ್ಕಬಳ್ಳಾಪುರ ಜಿಲ್ಲೆಯ ಇತಿಹಾಸ ಮತ್ತು ವಿಶ್ವಪ್ರಸಿದ್ಧ ನಂದಿಗಿರಿಧಾಮದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ 95 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ 200 ಆಸನಗಳ ಸಾಮರ್ಥ್ಯದ ಸಮ್ಮೇಳನದ ಸಭಾಂಗಣ ಉದ್ಘಾಟಿಸಿ ಮಾತನಾಡಿದರು.

ಇಷ್ಟು ದಿನಗಳ ಕಾಲ ಪ್ರವಾಸೋದ್ಯಮ ಎಂದರೆ ಶ್ರೀಮಂತರಿಗೆ ಎಂಬ ಭಾವನೆ ಇತ್ತು. ಪ್ರವಾಸೋದ್ಯಮ ಇಲಾಖೆ ಆ ರೀತಿಯ ಅಪವಾದವನ್ನು ತೊಡೆದು ಹಾಕಿ ಶ್ರಮಿಕರನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ಪ್ರವಾಸೋದ್ಯಮದಲ್ಲಿ ಹೊಸ ಬದಲಾವಣೆ ತರಲು ಚಿಂತನೆ ನಡೆಸಿದೆ. ಕೃಷಿ, ಶಿಕ್ಷಣ ಮತ್ತು ಶ್ರದ್ಧಾ



ಪ್ರವಾಸಿ ಕೇಂದ್ರಗಳನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ಅವುಗಳ ಬೆಳವಣಿಗೆಗೆ ಪೂರಕವಾಗಿ ಮತ್ತು ಸಹಕಾರಿಯಾಗಿ ಪ್ರವಾಸೋದ್ಯಮ ನೀತಿಯನ್ನು ರೂಪಿಸುವ ಅಗತ್ಯತೆಯನ್ನು ಸರ್ಕಾರ ಕಂಡುಕೊಂಡಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಹೊಸ ಪ್ರವಾಸೋದ್ಯಮ ನೀತಿಯನ್ನು ಜಾರಿ ಮಾಡಲು ನಿರ್ಧರಿಸಿದೆ. ಇನ್ನು ಒಂದು ತಿಂಗಳೊಳಗಾಗಿ ರಾಜ್ಯದಲ್ಲಿ ಹೊಸ ಪ್ರವಾಸೋದ್ಯಮ ನೀತಿ ಜಾರಿಯಾಗಲಿದೆ ಎಂದರು.

ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಜಗದೀಶ್ ಮಾತನಾಡಿ, ನಂದಿ ಬೆಟ್ಟದಲ್ಲಿ ಕೆಎಸ್ ಟಿಡಿಸಿ ಬಂದ ಮೇಲೆ ಪ್ರವಾಸಿಗರಿಗೆ ಎಲ್ಲಿ ಏನಿದೆ ಎಂದು ತಿಳಿಯಲು ಸೂಚನಾ ಫಲಕಗಳನ್ನು ಹಾಕಲಾಗಿದೆ. ಶೌಚಾಲಯ ವ್ಯವಸ್ಥೆಯನ್ನು ಉತ್ತಮ ಗೊಳಿಸಲಾಗಿದೆ, ಬೆಟ್ಟದ ಸ್ವಚ್ಚತೆಗೆ 20 ಮಂದಿ ಸಿಬ್ಬಂದಿ ನೇಮಿಸಲಾಗಿದೆ, ಬ್ಯಾಂಬೂ ವಾಕ್ ವೇಯನ್ನು ಪುನರ್ ಅಭಿವೃದ್ಧಿ ಪಡಿಸಲಾಗಿದೆ. ನೆಲ್ಲಿಕಾಯಿ ಬಸವಣ್ಣ



ದೇವಾಲಯವನ್ನು ಹೊಸದಾಗಿ ನವೀಕರಣ ಮಾಡಲಾಗಿದೆ. ಎಲ್ಲೆಡೆ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. 150 ಸೋಲಾರ್ ಲೈಟ್ ಗಳನ್ನು ಅಳವಡಿಸಲಾಗಿದೆ. ಉತ್ತಮ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಪ್ರವಾಸಿಗರು ಕುಳಿತುಕೊಳ್ಳಲು ಹೊಸದಾಗಿ 50 ವಿಶ್ರಾಂತಿ ಆಸನಗಳನ್ನು ಅಳವಡಿಸಲಾಗಿದೆ. ಪಾರ್ಕಿಂಗ್ ವ್ಯವಸ್ಥೆಯನ್ನು ಉತ್ತಮ ಪಡಿಸಿ 4 ತಿಂಗಳಲ್ಲಿ ಸುಮಾರು 6 ಕೋಟಿ ಆದಾಯ ತಂದುಕೊಡಲಾಗಿದೆ. ಮುಂದಿನ ದಿನಗಳಲ್ಲಿ ಆದಾಯ ಹೆಚ್ಚಿಸಲು ಯೋಜಿಸಲಾಗಿದೆ. ಒಟ್ಟಾರೆ ನಂದಿ ಬೆಟ್ಟವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಇನ್ನಷ್ಟು ಪ್ರವಾಸಿಗರನ್ನು ಆಕರ್ಷಿಸಲು ಯೋಜಿಸಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕೆ.ಎಸ್.ಟಿ.ಡಿ. ನಿಗಮದ ಸ್ಥಳೀಯ ಅಧಿಕಾರಿಗಳು ಹಾಜರಿದ್ದರು.

## ಹಕ್ಕುಪತ್ರ ನೀಡುವಂತೆ ಸಚಿವ ಎಚ್ ಕೆ ಪಾಟೀಲರಿಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದಲ್ಲಿರುವ ಅಂಬಿಗೇರ, ಸುಣಗಾರ, ಗಂಗಾಮತ, ಸಮುದಾಯದವರು ಬಹಳ ವರ್ಷಗಳಿಂದ ನಗರದ ಹೊರ ವಲಯದಲ್ಲಿ ಸುಣ್ಣದ ಭಟ್ಟಿ ಹಾಕಿಕೊಂಡು ಸುಣ್ಣದ ವ್ಯಾಪಾರ ಮಾಡುತ್ತ ಜೀವನ ಸಾಗಿಸುತ್ತಿದ್ದು, ಹಲವಾರು ಕುಟುಂಬಗಳ ಜೀವನ ಅಸ್ಥಿರವಾಗಿದೆ. ಅವರ ಕುಟುಂಬಗಳಿಗೆ ಆಧಾರವಾಗಿರುವ ಸುಣ್ಣದ ಭಟ್ಟಿ ಜಾಗೆಯ ಹಕ್ಕುಪತ್ರ ನೀಡುವಂತೆ ಸಮಾಜದ ಯುವ ಮುಖಂಡ ಸಂಗಮೇಶ ಹಾದಿಮನಿ ಕಾನೂನು, ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ ಎಚ್ ಕೆ ಪಾಟೀಲರಿಗೆ ಮನವಿ ಸಲ್ಲಿಸಿದರು.

ಮನವಿ ಪರಿಶೀಲಿಸಿದ ಸಚಿವರು, ಸಂಬಂಧಿಸಿದ ಇಲಾಖೆಗೆ ಈ ಕುರಿತು ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಈ ಸಂದರ್ಭದಲ್ಲಿ ಸಮಾಜ ಟ್ರಸ್ಟ್ ಯುವ ಘಟಕದ ಅಧ್ಯಕ್ಷ ಮಂಜುನಾಥ ಗುಡಿಸಾಗರ, ಗದಗ ಜಿಲ್ಲಾ ಕಾಂಗ್ರೆಸ್ ಮೀನುಗಾರ ವಿಭಾಗದ ಜಿಲ್ಲಾಧ್ಯಕ್ಷ ಗುರಪ್ಪ ತಿರ್ಲಾಪೂರ, ಉಮೇಶ ಗುಡಿಸಾಗರ, ಹರೀಶ ಬಾರಕೇರ ಉಪಸ್ಥಿತರಿದ್ದರು.

### ಯುಡಿಐಡಿ ಕಾರ್ಡ್ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಮಹಾಂತೇಶ್ ಕುರ್ತಕೋಟಿ

## ವಿಕಲಚೇತನರು ಯುಡಿಐಡಿ ಕಾರ್ಡ್ ಕಡ್ಡಾಯವಾಗಿ ಪಡೆದುಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯವನ್ನು ಪಡೆದುಕೊಳ್ಳಲು ಯುಡಿಐಡಿ ಕಾರ್ಡ್ ಅವಶ್ಯಕವಾಗಿದೆ. ಹೀಗಾಗಿ ವಿಕಲಚೇತನರು ಕಡ್ಡಾಯವಾಗಿ ಯುಡಿಐಡಿ ಕಾರ್ಡ್ ಗಳನ್ನು ಪಡೆದುಕೊಳ್ಳಬೇಕು ಎಂದು ಎಂಆರ್ ಡಬ್ಲ್ಯೂ ಮಹಾಂತೇಶ ಕುರ್ತಕೋಟಿ ಹೇಳಿದರು.

ತಾಲೂಕಿನ ಹಳ್ಯಾಳ ಗ್ರಾಮದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಅಂಗವಿಕಲರ ಮನೆ ಬಾಗಿಲಿಗೆ ಯುಡಿಐಡಿ ಕಾರ್ಡ್ ವಿತರಣೆ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯುಡಿಐಡಿ ಕಾರ್ಡ್



ಪಡೆದುಕೊಳ್ಳುವುದರಿಂದ ಹಲವಾರು ರೀತಿಯ ಉಪಯೋಗಗಳಿವೆ ಎಂದರು.

ಪಂಚಾಯತ ಅಭಿವೃದ್ಧಿ ಅಧಿಕಾರಿ ಪಿ.ಆರ್. ವಾಲೀಕಾರ ಮಾತನಾಡಿ, ಗ್ರಾಮ ಪಂಚಾಯತ ಅನುದಾನದಲ್ಲಿ ಶೇ.5 ರಷ್ಟು ಅನುದಾನವನ್ನು ವಿಶೇಷಚೇತನರ ಅಭಿವೃದ್ಧಿಗಾಗಿ ಮೀಸಲಿಡಲು ಸರ್ಕಾರ ಸೂಚಿಸಿದೆ. ಅದೇ ರೀತಿ ಕಳೆದ ವರ್ಷ ಉತ್ತಮ ಗುಣಮಟ್ಟದ 31 ಹೊಲಿಗೆ ಯಂತ್ರಗಳನ್ನು ವಿಶೇಷಚೇತನರಿಗೆ ನೀಡಲಾಗಿದೆ. ವಿಶೇಷ ಚೇತನರಿಗೆ ಸಮುದಾಯ ಭವನ ನಿರ್ಮಿಸುವಂತೆ ಮನವಿ ಸಲ್ಲಿಸಿದ್ದಾರೆ. ಅನುದಾನ ಸಂಗ್ರಹಿಸಿ ಭವನ ನಿರ್ಮಾಣ ಮಾಡಲಾಗುತ್ತದೆ ಎಂದು ತಿಳಿಸಿದರು.

ಉಪಾಧ್ಯಕ್ಷೆ ಕಮಲವ್ವ ಜವಳಗೇರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ವಿಶೇಷಚೇತನರಿಗೆ ಯುಡಿಐಡಿ ಕಾರ್ಡ್ ಗಳನ್ನು ವಿತರಿಸಲಾಯಿತು.

ಸದಸ್ಯರಾದ ಮಂಜುನಾಥ ನಾಗನಗೌಡ್ರ, ಆರೋಗ್ಯ ಇಲಾಖೆ ಅಧಿಕಾರಿ ಸಬೀನಾ ಕಣವಿ, ವಿಆರ್ ಡಬ್ಲ್ಯೂ ಮಂಜುನಾಥ ಮೇಟಿ, ಶಾಲಾ ಮುಖ್ಯ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತರು, ಆಶಾ ಕಾರ್ಯಕರ್ತರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಮೈಸೂರಿನಲ್ಲಿಂದು ಸಚಿವ ಎಚ್.ಕೆ.ಪಾಟೀಲ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ



ಅವರ ಪ್ರವಾಸ ವಿವರ ಇಂತಿದೆ.

ಆಗಸ್ಟ್ 12 ರಂದು ಮುಂಜಾನೆ 10.30 ಗಂಟೆಗೆ ಬೆಂಗಳೂರಿನಿಂದ ಮೈಸೂರಿಗೆ ರಸ್ತೆ ಮೂಲಕ ಆಗಮಿಸುವರು.

ಮುಂಜಾನೆ 11 ಗಂಟೆಗೆ ದಸರಾ ವಸ್ತು ಪ್ರದರ್ಶನ ಮೈದಾನದಲ್ಲಿ ಆಯೋಜಿಸಿರುವ ರಾಜ್ಯ ಮಟ್ಟದ ವಕೀಲರ 10ನೇ ಸಮ್ಮೇಳನದಲ್ಲಿ ಪಾಲ್ಗೊಳ್ಳುವರು.

ಸಾಯಂಕಾಲ 5.00 ಗಂಟೆಗೆ ಪಾಂಡವಪುರ ತಾಲೂಕಿನ ಗಿರಿಯರ ಹಳ್ಳಿಯಲ್ಲಿ ಕೆ.ಆರ್.ಎಸ್. ಡ್ಯಾಂನ ಹಿನ್ನಿರಿನಲ್ಲಿ ಆಯೋಜಿಸಿರುವ ಅಂತರಾಷ್ಟ್ರೀಯ ಜಲಕ್ರೀಡೆ ಸಮ್ಮೇಳನದಲ್ಲಿ ಪಾಲ್ಗೊಂಡು ರಾತ್ರಿ 10.30 ಗಂಟೆಗೆ ಮೈಸೂರಿನಿಂದ ರೈಲಿನ ಮೂಲಕ ಪ್ರಯಾಣ ಬೆಳಸಿ ಆಗಸ್ಟ್ 13 ರಂದು ಬೆಳಿಗ್ಗೆ 7 ಗಂಟೆಗೆ ಹುಬ್ಬಳ್ಳಿಗೆ ಆಗಮಿಸುವರು ಎಂದು ಸಚಿವರ ಕಾರ್ಯಾಲಯದ ಮೂಲಗಳು ತಿಳಿಸಿವೆ.

## ಆಕ್ಷೇಪಣೆ /ತಕರಾರುಗಳ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮೊಗೇರ ಜಾತಿಯು ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸರ್ಕಾರದ ಆದೇಶದನ್ವಯ ಪ್ರವರ್ಗ-1 ಅನುಕ್ರಮ ಸಂಖ್ಯೆ 6(ae)ರಲ್ಲಿ ಮೊಗೇರ ಜಾತಿಯನ್ನು ಕೈ ಬಿಡುವ ಬಗ್ಗೆ ಸಾರ್ವಜನಿಕರು/ಸಂಘ -ಸಂಸ್ಥೆಗಳಿಂದ ಆಕ್ಷೇಪಣೆ / ತಕರಾರುಗಳನ್ನು ಆಹ್ವಾನಿಸಲಾಗಿದೆ.

ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಈ ಪ್ರಕಟಣೆ ಹೊರಡಿಸಿದ 10 ದಿನಗಳೊಳಗೆ ಸಂಬಂಧಿಸಿದ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಲಿಖಿತವಾಗಿ ಆಕ್ಷೇಪಣೆ / ತಕರಾರುಗಳನ್ನು ಸಲ್ಲಿಸಬೇಕೆಂದು ಗದಗ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವಾತಂತ್ರ್ಯೋತ್ಸವ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತದಿಂದ ಸ್ವಾತಂತ್ರ್ಯೋತ್ಸವ ದಿನಾಚರಣೆ ನಿಮಿತ್ತ ಆಗಸ್ಟ್ 15 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗುವುದು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಿವರು. ರಾಜ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಧ್ವಜಾರೋಹಣ ನೆರವೇರಿಸುವರು.

ಮುಖ್ಯಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ನರಗುಂದ ▸▸ 3ನೇ ಪುಟಕ್ಕೆ

## 'ಮುಖ್ಯಮಂತ್ರಿಗಳ ಪರಿಹಾರ ನಿಧಿ'ಗೆ 4 ಕೋಟಿ ರೂ.ಗಳ ಚೆಕ್ ಹಸ್ತಾಂತರ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಕೈಗಾರಿಕಾ ಮೂಲ ಸೌಲಭ್ಯ ಅಭಿವೃದ್ಧಿ ನಿಗಮದ ವತಿಯಿಂದ 3 ಕೋಟಿ ರೂ ಮತ್ತು ಕರ್ನಾಟಕ ರಾಜ್ಯ ಮಾರುಕಟ್ಟೆ ಸಂವಹನ ಹಾಗೂ ಜಾಹೀರಾತು ಸಂಸ್ಥೆ(ಎಂಸಿಎ) ವತಿಯಿಂದ 1 ಕೋಟಿ ರೂ.ಗಳ ಚೆಕ್ ಅನ್ನು 'ಮುಖ್ಯಮಂತ್ರಿಗಳ ಪರಿಹಾರ ನಿಧಿ'ಗೆ ನೀಡಲಾಯಿತು.

ಈ ಸಂಸ್ಥೆಗಳ ಅಧ್ಯಕ್ಷರು ಹಾಗೂ ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲರು ಒಟ್ಟೂ 4 ಕೋಟಿ ರೂ.ಗಳ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಮೂಲಸೌಕರ್ಯ ಅಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತ, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಕೆಐಎಡಿಬಿ ವ್ಯವಸ್ಥಾಪಕ ನಿರ್ದೇಶಕ ಡಾ. ಎಂ ಆರ್ ರವಿ, ಎಂಸಿಎ ವ್ಯವಸ್ಥಾಪಕ ನಿರ್ದೇಶಕ ಸಿದಲಿಂಗಪ್ಪ ಜಿ ಪೂಜಾರ ಸೇರಿದಂತೆ ಸಂಸ್ಥೆಯ ಅಧಿಕಾರಿಗಳು ಹಾಜರಿದ್ದರು.

## ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಆಗಸ್ಟ್ 13 ರಂದು ರವಿವಾರ ಬೆಳಿಗ್ಗೆ:6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ರಾಜೀವಗಾಂಧಿ ನಗರದ ಶಿವಶರಣ ಹರಳಯ್ಯ ಉದ್ಯಾನವನದಲ್ಲಿ ಪ್ರಸಾದ ಸುತಾರ ಅವರಿಂದ "ವಚನ ಸಂಗೀತ" ವಿಶ್ವೇಶ್ವರಯ್ಯ ನಗರದ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಯೋಗೇಶ್ವರಿ ಭಾವಿಕಟ್ಟಿ ಅವರಿಂದ "ಸುಗಮ ಸಂಗೀತ" ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಸೋಮಶೇಕರ ದೊಡ್ಡಮನಿ ಇವರಿಂದ "ಸುಗಮ ಸಂಗೀತ" ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಶುವೈದ್ಯಕೀಯ ಮಹಾವಿದ್ಯಾಲಯ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ

## ಗ್ಯಾರಂಟಿ ಜಾರಿಯಿಂದ ರಾಜ್ಯದ ಜಿಡಿಪಿ ಹೆಚ್ಚಳ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ರಾಜ್ಯ ಸರಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳಿಂದ ರೈತರು, ಬಡವರು, ಮಹಿಳೆಯರು, ಕಾರ್ಮಿಕರು, ಹಿಂದುಳಿದ ವರ್ಗಗಳಿಗೆ ಸೇರಿದ ಪ್ರತಿಯೊಂದು ಕುಟುಂಬಕ್ಕೆ ಐದು ಸಾವಿರ ರೂಪಾಯಿ ಲಭಿಸುತ್ತಿದೆ. ಇದರಿಂದ ಆರ್ಥಿಕ ಚಟುವಟಿಕೆಗಳು ಗರಿಗೆದರಲಿವೆ. ಇದರಿಂದ ರಾಜ್ಯದ ಜಿಡಿಪಿ ಹೆಚ್ಚಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ಅಥಣಿ ತಾಲ್ಲೂಕಿನ ಕೊಕಟನೂರಿನಲ್ಲಿ ಶುಕ್ರವಾರ ನಡೆದ ಸಮಾರಂಭದಲ್ಲಿ



ಪಶುವೈದ್ಯಕೀಯ ಮಹಾವಿದ್ಯಾಲಯ ಲೋಕಾರ್ಪಣೆಗೊಳಿಸಿ ವಿವಿಧ ಅಭಿವೃದ್ಧಿ ಉದ್ಘಾಟನೆ ಮತ್ತು ಶಿಲಾನ್ಯಾಸ ನೆರವೇರಿಸಿ ಅವರು ಮಾತನಾಡಿದರು.

ಶಕ್ತಿ ಯೋಜನೆಯಡಿ ಇದುವರೆಗೆ 35 ಕೋಟಿ ಮಹಿಳೆಯರು ಬಸ್ ನಲ್ಲಿ ಉಚಿತವಾಗಿ ಪ್ರಯಾಣಿಸಿದ್ದಾರೆ. ಇದರಿಂದ ಸರಕಾರದ ಆದಾಯ ಕೂಡ ಹೆಚ್ಚಾಗಲಿದೆ.

ರಾಜ್ಯದ 1.30 ಕೋಟಿಗೂ ಅಧಿಕ ಕುಟುಂಬಗಳಿಗೆ ಪ್ರತಿ ತಿಂಗಳು ಎರಡು ಸಾವಿರ ▸▸ 3ನೇ ಪುಟಕ್ಕೆ

### ಅಥಣಿಯಲ್ಲಿ ಬಸವೇಶ್ವರರ ಪುತ್ಥಳಿ ಅನಾವರಣ

ಇದಕ್ಕೂ ಮುಂಚೆ ಅಥಣಿಯ ಬಸವೇಶ್ವರ ವೃತ್ತದಲ್ಲಿ ಸ್ಥಾಪಿಸಲಾಗಿರುವ ಜಗಜ್ಯೋತಿ ಶ್ರೀ ಬಸವೇಶ್ವರರ ಪುತ್ಥಳಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅನಾವರಣಗೊಳಿಸಿದರು.

ಅಥಣಿ ಮತಕ್ಷೇತ್ರಕ್ಕೆ ಶಾಸಕ ಲಕ್ಷ್ಮಣ ಸವದಿ ಅವರ ಕೊಡುಗೆ ಅಪಾರವಾಗಿದೆ. ಆಯಾ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುವುದು ಜನಪ್ರತಿನಿಧಿಗಳ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಸವದಿ ಅವರ ಸಾಧನೆ ಅಭಿನಂದನಾರ್ಹ.

ನೀರಾವರಿ ಯೋಜನೆ ಅನುಷ್ಠಾನ ಸೇರಿದಂತೆ ಎಲ್ಲಾ ಬೇಡಿಕೆ ಹಂತ ಹಂತವಾಗಿ ಈಡೇರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

## ಆ.14ರಂದು ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಶಿರಹಟ್ಟಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಆಗಸ್ಟ್ 14ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಶಿರಹಟ್ಟಿ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುತ್ತಿರುವ ನಗರ/ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ, ಎನ್‌ಜೆವೈ ಫೀಡರ್, ಐಪಿಪಿ ಫೀಡರ್ ಹಾಗೂ ಮೆ: ಬಿಪಿಸಿಎಲ್ 1 ಮತ್ತು 2, ಎಲಿಶಿರೂರ ಇವರ ಗಾಳಿಯಂತ್ರ ಘಟಕಕ್ಕೆ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ, ಸಾರ್ವಜನಿಕರು ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ತುಳಸಿ ಪೂಜೆ, ಪ್ರವಚನ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಾಸರ ಓಣಿಯ ಶ್ರೀ ವಿಠೋಬ ದೇವಸ್ಥಾನದಲ್ಲಿ ಅಧಿಕ ಮತ್ತು ಶ್ರಾವಣ ಮಾಸ ಪರ್ಯಂತ ಪ್ರತಿ ದಿನ ಸಂಜೆ 4.30ರಿಂದ ತುಳಸಿ ಪೂಜೆ ಮತ್ತು 6ರಿಂದ 8 ಗಂಟೆಯವರೆಗೆ ಪಾರಾಯಣ ಮತ್ತು ಪ್ರವಚನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಘಟಕರು ವಿನಂತಿಸಿದ್ದಾರೆ.

## ಗುಂಪು ಹತ್ಯೆ ಪ್ರಕರಣಗಳಲ್ಲಿ ಮರಣದಂಡನೆ ಶಿಕ್ಷೆ ನೀಡಲಾಗುವುದು- ಅಮಿತ್ ಶಾ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ವಸಾಹತುಶಾಹಿ ಕಾಲದ ಭಾರತೀಯ ಕ್ರಿಮಿನಲ್ ಕಾನೂನುಗಳ ಕೂಲಂಕುಷ ತಿದ್ದುಪಡಿಗಾಗಿ ಸರಕಾರ ಮಸೂದೆಯನ್ನು ಮಂಡಿಸಿದೆ.

ಗುಂಪು ಹತ್ಯೆ ಪ್ರಕರಣಗಳಲ್ಲಿ ಮರಣದಂಡನೆ ಶಿಕ್ಷೆವರೆಗೆ ಕಠಿಣ ಶಿಕ್ಷೆ ವಿಧಿಸಲಾಗುವುದು ಎಂದು ಸಂಸತ್ತಿನಲ್ಲಿ ಅಮಿತ್ ಶಾ ಹೇಳಿದ್ದಾರೆ. ಕ್ರಿಮಿನಲ್ ಕಾನೂನುಗಳಲ್ಲಿ ಪರಿಶೀಲನೆ ನಡೆಸುವುದಾಗಿ ಹೇಳಿದ್ದಾರೆ. ಗುಂಪು ಹತ್ಯೆ ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆಯು ಕನಿಷ್ಠ ಏಳು ವರ್ಷಗಳಿಂದ ಮರಣದಂಡನೆಯವರೆಗೆ ಇರಲಿದೆ ಎಂದು ಹೇಳಿದ್ದಾರೆ.

ಕೊಲೆ ಪ್ರಕರಣಗಳಲ್ಲಿ ಮರಣದಂಡನೆ ಅಥವಾ ಜೀವಾವಧಿ ಶಿಕ್ಷೆ ವಿಧಿಸಲಾಗುತ್ತದೆ ಮತ್ತು ದಂಡ ವಿಧಿಸಲಾಗುತ್ತದೆ

.ಐದು ಅಥವಾ ಅದಕ್ಕಿಂತ ಹೆಚ್ಚು ವ್ಯಕ್ತಿಗಳ ಒಂದು ಗುಂಪು ಜನಾಂಗ, ಜಾತಿ ಅಥವಾ ಸಮುದಾಯ, ಲಿಂಗ, ಹುಟ್ಟಿದ ಸ್ಥಳ, ಭಾಷೆ, ವೈಯಕ್ತಿಕ ನಂಬಿಕೆ ಅಥವಾ ಯಾವುದೇ ಇತರ ಆಧಾರದ ಮೇಲೆ ಹತ್ಯೆಯನ್ನು ನಡೆಸಿದಾಗ ಅಂತಹ ಗುಂಪಿನ ಪ್ರತಿಯೊಬ್ಬ ಸದಸ್ಯನಿಗೆ ಮರಣದಂಡನೆ ಅಥವಾ ಜೀವಾವಧಿ ಶಿಕ್ಷೆ ವಿಧಿಸಲಾಗುತ್ತದೆ ಇದರ ಜೊತೆಗೆ ದಂಡವನ್ನು ಕೂಡ ವಿಧಿಸಲಾಗುತ್ತದೆ ಎಂದು ಹೇಳಿದ್ದಾರೆ.

## ಅಂಗನವಾಡಿ ಕೇಂದ್ರದ ಮೇಲ್ಛಾವಣಿ ಕುಸಿದು 10 ತಿಂಗಳ ಮಗುವಿಗೆ ಗಾಯ!

■ವಿಜಯಸಾಕ್ಷಿ ಸುದ್ದಿ, ಯಾದಗಿರಿ

ಅಂಗನವಾಡಿ ಕೇಂದ್ರದ ಮೇಲ್ಛಾವಣಿ ಕುಸಿದು ಬಿದ್ದ ಪರಿಣಾಮ 10 ತಿಂಗಳ ಮಗುವಿಗೆ ಗಾಯಗೊಂಡಿರುವ ಘಟನೆ ಗುರುವಾರ ಯಾದಗಿರಿ ಜಿಲ್ಲೆಯ ಮರಕಲ್ ಗ್ರಾಮದಲ್ಲಿ ನಡೆದಿದೆ.

ಅಂಗನವಾಡಿ ಕೇಂದ್ರದಲ್ಲಿ ಶಿಶುಗಳಿಗೆ ಇಂದ್ರಧನುಷ್ ಲಸಿಕೆ ಹಾಕುವ ಕಾರ್ಯಕ್ರಮವನ್ನು ಅಧಿಕಾರಿಗಳು ಆಯೋಜಿಸಿದ್ದರು. ಅಂಗನವಾಡಿ ಕೇಂದ್ರಕ್ಕೆ ಲಸಿಕೆ ಹಾಕಿಸಲು ಮಗುವಿನ ಜೊತೆ ಕುಟುಂಬಸ್ಥರು ಆಗಮಿಸಿದ್ದರು. ಈ ವೇಳೆ ಅಂಗನವಾಡಿ ಕೇಂದ್ರದ ಮೇಲ್ಛಾವಣಿ ಕುಸಿದಿದೆ.

ಗಾಯಗೊಂಡ ಮಗು ತಲೆಗೆ ಬ್ಯಾಂಡೇಜ್ ಹಾಕಿಕೊಂಡು ನಗುತ್ತಿರುವ ಮಗುವಿನ ಚಿತ್ರ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಇಂದ್ರಧನುಷ್ ಕಾರ್ಯಕ್ರಮದಲ್ಲಿ ಡಿಫ್ತೀರಿಯಾ, ನಾಯಿಕೆಮ್ಮು, ನ್ಯುಮೋನಿಯಾಕ್ಕೆ ಕಾರಣವಾಗುವ ಹಿಮೋಫಿಲಸ್ ಇನ್ಫ್ಲುಯೆಂಜಾ ಟೈಪ್ ಬಿ ಮತ್ತು ಇತರ ಎಂಟು ಮಾರಣಾಂತಿಕ ಕಾಯಿಲೆಗಳ ವಿರುದ್ಧ ಲಸಿಕೆ ಹಾಕಲಾಗುತ್ತದೆ.

10 ತಿಂಗಳ ಮಗು ಕೀರ್ತಿಯನ್ನು ಇತರ ಅನೇಕ ಮಕ್ಕಳೊಂದಿಗೆ ಅಲ್ಲಿಗೆ ಕರೆದೊಯ್ಯಲಾಯಿತು. ಲಸಿಕೆ ಕಾರ್ಯಕ್ರಮ ನಡೆಯುತ್ತಿದ್ದಾಗ ಕೇಂದ್ರದ ಮೇಲ್ಛಾವಣಿ ಏಕಾಏಕಿ ಕುಸಿದು ಬಿದ್ದಿದೆ. ಆರಕ್ಕೂ ಹೆಚ್ಚು ಮಕ್ಕಳು ಮತ್ತು ಪೋಷಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಗಾಯಗೊಂಡವರನ್ನು ಶಹಾಪುರ ತಾಲೂಕು ಆಸ್ಪತ್ರೆಗೆ ದಾಖಲಿಸಲಾಗಿದೆ.

ಬಳಿಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೂರು ವರ್ಷಗಳ ಹಿಂದೆ ಕಟ್ಟಡ ನಿರ್ಮಾಣವಾಗಿದ್ದು, ಕಳಪೆ ಕಾಮಗಾರಿಯಿಂದ ಘಟನೆ ನಡೆದಿದೆ ಎಂದು ಗ್ರಾಮಸ್ಥರು ದೂರಿದ್ದಾರೆ.





ಮುಂಡರಗಿ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್‌ನ ಪ್ರಧಾನ ಕಾರ್ಯದರ್ಶಿಗಳಾಗಿ ಮಂಜುನಾಥ ಮುಧೋಳ ಹಾಗೂ ವೀಣಾ ಹೇಮಂತಗೌಡ ಪಾಟೀಲ ಇವರನ್ನು ಆಯ್ಕೆ ಮಾಡಲಾಗಿದೆ ಎಂದು ತಾಲೂಕಾ ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ ಎಮ್ ಜಿ ಗಚ್ಚಣ್ಣವರ ತಾಲೂಕಾ ಕಾರ್ಯಕಾರಿಣಿ ಸಭೆಯಲ್ಲಿ ಸರ್ವರ ಅಭಿಪ್ರಾಯದ ಮೇರೆಗೆ ಆದೇಶ ಮಾಡಿದರು.

### ಇಂದು 'ವಿಶ್ವ ಆನೆ ದಿನ'ದ ಪ್ರಯುಕ್ತ ಲೇಖನ

# ಕರ್ನಾಟಕದಲ್ಲಿ ಆನೆಗಳದ್ದೇ ಕಾರುಬಾರು!

'ಆನೆ' ಎಂಬ ಎರಡಕ್ಷರ ಕೇಳಿದೊಡನೆ ನಮಗೆ ಅದರ ಸಾಂಸ್ಕೃತಿಕ ವೈಭವ ಒಮ್ಮೆಲೇ ನೆನಪಾಗುತ್ತದೆ. ಹಲವು ವಿಷಯಗಳಿಗೆ ಆನೆ ಅತ್ಯುತ್ತಮ ಉದಾಹರಣೆಯಾಗಿದೆ. ಇತ್ತೀಚೆಗೆ ತಾನೇ ಹುಲಿಗಣತಿಯಲ್ಲಿ ನಮ್ಮ ಕರ್ನಾಟಕ ಭಾರತದಲ್ಲಿ ಎರಡನೇ ಸ್ಥಾನ ಪಡೆದಿತ್ತು. ಈಗ ಮತ್ತೊಂದು ಹೆಮ್ಮೆಯ ವಿಷಯವೆಂದರೆ, ಆನೆ ಗಣತಿಯಲ್ಲೂ ದೇಶದಲ್ಲೇ ನಮ್ಮ ಕರ್ನಾಟಕ ಮೊದಲ ಸ್ಥಾನದಲ್ಲಿದೆ! 'ವಿಶ್ವ ಆನೆ ದಿನ'ದ ಸಂದರ್ಭದಲ್ಲಿ ನಾವು ಹೆಮ್ಮೆಪಡಲೇಬೇಕಿದೆ.

ಆನೆ ಅತಿ ದೊಡ್ಡ ಮತ್ತು ಭಾರವಿರುವ ಪ್ರಾಣಿಯಾಗಿದ್ದು, ತಿಳಿ ಬೂದಿ ಬಣ್ಣದಿಂದ ಕೂಡಿದೆ. ಆನೆಯ ಎತ್ತರ 10ರಿಂದ 13 ಅಡಿ. ಅದರ ತೂಕ 5ರಿಂದ 6 ಸಾವಿರ ಕೆಜಿಯವರೆಗೆ. ಎರಡು ದೊಡ್ಡದಾದ ಕಿವಿಗಳು, ಚಿಕ್ಕ ಹಾಗೂ ತೀಕ್ಷ್ಣ ಕಣ್ಣು, ಚಿಕ್ಕದಾದ ಬಾಲ, ದಪ್ಪ ಪಾದಗಳನ್ನು ಹೊಂದಿರುತ್ತದೆ.




ಈ ವಿನ್ಯಾಸದ ಪಾದಗಳು ದೀರ್ಘಕಾಲದವರೆಗೂ ನಿಂತಿರಲು ಸಹಕಾರಿಯಾಗಿದೆ. ಆನೆಯ ಚರ್ಮ ತುಂಬಾ ಸೂಕ್ಷ್ಮವಾಗಿದ್ದು, ಉದ್ದವಾದ ಸೊಂಡಿಲನ್ನು ನೀರು ಮತ್ತು ಆಹಾರ ತೆಗೆದುಕೊಳ್ಳಲು ಬಳಸುತ್ತದೆ.

ಅಡಿಕೇಲಿ ಹೋದ ಮಾನ ಆನೆ ಕೊಟ್ಟರೂ ಬಾರದು, ಆನೆ ಸತ್ತರೂ ಸಾವಿರ ಬದುಕಿದ್ದರೂ ಸಾವಿರ, ಲೋಕಸರ ಗುಂಪಾದರೆ ಆನೆ ಕೂಡ ದಾಟುವುದಿಲ್ಲ, ಆನೆ ಹೊಟ್ಟೆಗೆ ಆರು ಕಾಸು ಮಜ್ಜಿಗೆ ಈ ರೀತಿಯ ಗಾದೆ, ಒಗಟು, ನುಡಿಗಟ್ಟುಗಳ ಮೂಲಕ ಆನೆಯ ಕುರಿತು ನಮ್ಮ ಕನ್ನಡ ಪದ ಬಳಕೆ ಸಂಪತ್ತು ಅಗಾಧವಾಗಿದೆ. ಆನೆಯನ್ನು ಪಳಗಿಸಲು ಒಂದು ಸಣ್ಣ ಅಂಕುಶ ಸಾಕು. ಪ್ರಾಣಿಯನ್ನು ಮಾನವ ಹಿಡಿದು, ಪಳಗಿಸಿ ಅದರಿಂದ ಅನೇಕ ಪ್ರಯೋಜನ ಪಡೆದುಕೊಳ್ಳುತ್ತಿದ್ದಾನೆ. ದಟ್ಟ ಅರಣ್ಯದಲ್ಲಿ ದೊಡ್ಡ ದೊಡ್ಡ ಮರಗಳನ್ನು ಸಾಗಿಸುವಲ್ಲಿ, ಅರಣ್ಯ ಇಲಾಖೆಯಲ್ಲಿ ಯಾವುದಾದರೂ ಕಾರ್ಯಾಚರಣೆ ಮಾಡುವಾಗ, ನಾಡಿಗೆ ಲಗ್ಗೆಯಿಟ್ಟ ಹುಲಿ, ಚಿರತೆ ಸೆರೆ ಸಂದರ್ಭದಲ್ಲಿ ಆನೆಯನ್ನು ಬಳಸುತ್ತಾರೆ. ಇನ್ನೇನು ವಿಶ್ವವಿಖ್ಯಾತ ಮೈಸೂರು ದಸರಾ ಬರುತ್ತಿದೆ. ಮೈಸೂರು ದಸರಾ ಎಂದರೆ ಆನೆ, ಆನೆ ಎಂದರೆ ಮೈಸೂರು ದಸರಾ ಎನ್ನುವಂತಾಗಿದೆ. ದಸರಾದ ಇತಿಹಾಸದಲ್ಲಿ ಚಿನ್ನದ ಅಂಬಾರಿ ಹೊತ್ತಿರುವ ಆನೆಗಳು ಸಹ ಇತಿಹಾಸದ ಪುಟಗಳಿಂದಲೂ ಪ್ರಸಿದ್ಧಿ ಪಡೆದಿವೆ. ಈ ಸಂದರ್ಭದಲ್ಲಿ ದ್ರೋಣ, ಬಲರಾಮ ಮುಂತಾದ ಆನೆಗಳು ನೆನಪಿಗೆ ಬರುತ್ತವೆ.

ಇತ್ತೀಚಿನ ದಿನಗಳಲ್ಲಿ ಆನೆಯ ಚರ್ಮ, ಬಾಲದ ಕೂದಲು ಹೆಚ್ಚು ಬೆಲೆಬಾಳುವುದರಿಂದ ಇವೆಲ್ಲದರ ಮಾರಾಟಕ್ಕೆ ಆನೆಗಳು ಬಲಿಯಾಗುತ್ತಿವೆ.

ಅರಣ್ಯ ಇಲಾಖೆ ಈಗ ಕಟ್ಟುನಿಟ್ಟಿನ ಕಾಯ್ದೆಗಳನ್ನು ಜಾರಿಗೆ ತಂದು, ಅರಣ್ಯಕ್ಕೆ ಅಕ್ರಮವಾಗಿ ಪ್ರವೇಶ ಮಾಡುವವರ ವಿರುದ್ಧ ಕ್ರಮ ಜರುಗಿಸುತ್ತಿದೆ. ಜೊತೆಗೆ ದಂತ ಕಳ್ಳ ಸಾಗಾಣಿಕೆ ಮಾಡುವವರ ವಿರುದ್ಧ ಎಚ್ಚೆತ್ತುಕೊಂಡು, ಕಾಡುಗಳ್ಳರನ್ನು ಹಿಡಿದು ಶಿಕ್ಷಿಸುವುದರ ಮೂಲಕ ಆನೆ ಸಂತತಿಯನ್ನು ವೃದ್ಧಿಸುತ್ತಿದ್ದಾರೆ. ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ಅಧಿಕಾರಿಗಳಿಗೆಲ್ಲ ಅಭಿನಂದನೆಗಳನ್ನು ಸಲ್ಲಿಸಲೇಬೇಕು.

–ಕಾಳಿಹುಂಡಿ ಶಿವಕುಮಾರ್, ಮೈಸೂರು.

2017ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ 350 ಆನೆಗಳು ಹೆಚ್ಚಿವೆ. ಆಗ ಆನೆಗಣತಿ ಮಾಡಿದಾಗ 6,049 ಆನೆಗಳಿದ್ದವು. ಪ್ರಸ್ತುತ 6,395 ಆನೆಗಳು ಇವೆ. ಬಂಡೀಪುರ ಹುಲಿ ಸಂರಕ್ಷಣ ಪ್ರದೇಶದಲ್ಲಿ 1116 ಆನೆಗಳು, ನಾಗರಹೊಳೆ ಹುಲಿ ಸಂರಕ್ಷಣ ಪ್ರದೇಶದಲ್ಲಿ 831, ನಂತರ ಮಲೆ ಮಹದೇಶ್ವರ ಬೆಟ್ಟದ ವನ್ಯಜೀವಿ ವಿಭಾಗದಲ್ಲಿ 706, ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ 619 ಆನೆಗಳಿವೆ. ಇನ್ನುಳಿದಂತೆ ಭದ್ರಾ ಹುಲಿ ಸಂರಕ್ಷಿತ ಪ್ರದೇಶ, ಕಾವೇರಿ ವನ್ಯಜೀವಿ ವಿಭಾಗ, ಮಡಿಕೇರಿ ಪ್ರಾದೇಶಿಕ ವಿಭಾಗ, ಕೊಪ್ಪ ವಿಭಾಗ, ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನ, ಶಿವಮೊಗ್ಗ ವನ್ಯಜೀವಿ ವಿಭಾಗ, ಮಡಿಕೇರಿ ವನ್ಯಜೀವಿ ವಿಭಾಗ, ಹಾಸನ ವಿಭಾಗ, ಮೈಸೂರು ಪ್ರಾದೇಶಿಕ ವಿಭಾಗ, ವಿರಾಜಪೇಟೆ ವಿಭಾಗ, ಮಂಗಳೂರು ವಿಭಾಗ, ಕಾಳಿ ಹುಲಿ ಸಂರಕ್ಷಿತ ಪ್ರದೇಶ, ರಾಮನಗರ ವಿಭಾಗ, ಚಿಕ್ಕಮಗಳೂರು ವಿಭಾಗ, ಕೋಲಾರ ವಿಭಾಗ, ಭದ್ರಾವತಿ ವಿಭಾಗ, ಕುದುರೆಮುಖ, ಹಳಿಯಾಳ ವಿಭಾಗ, ಯಲ್ಲಾಪುರ ವಿಭಾಗಗಳಲ್ಲಿಯೂ ಆನೆಗಳು ಹೆಚ್ಚುತ್ತಿವೆ.

### 'ಕಾನೂನು ಅರಿವು-ನೆರವು' ಕಾರ್ಯಕ್ರಮದಲ್ಲಿ ದಿವಾಣಿ ನ್ಯಾಯಾಧೀಶರಾದ ಜ್ಯೋತಿ ಕಾಗಿನಕರ ಅಭಿಪ್ರಾಯ

# ಕಾರ್ಮಿಕ ಮಕ್ಕಳ ಭವಿಷ್ಯ ಶಿಕ್ಷಣದಲ್ಲಿ ಅಡಗಿದೆ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಕೂಲಿ ಕಾರ್ಮಿಕರ ಮಕ್ಕಳನ್ನು ಗುರುತಿಸಿ, ಶೈಕ್ಷಣಿಕವಾಗಿ ಮೇಲೆ ಬರಲು ಉತ್ತೇಜನ ನೀಡುತ್ತಿರುವ ಕಾರ್ಮಿಕ ಸಂಘಟನೆಯ ಕಾರ್ಯ ಶ್ಲಾಘನೀಯವಾಗಿದೆ. ಜೀವನದಲ್ಲಿ ಮುಂದೆ ಬರಲು ತಂದೆ-ತಾಯಿಗಳು ತಮ್ಮ ಮಕ್ಕಳನ್ನು ಕಷ್ಟಪಟು ಬೆಳೆಸಿ ಶಿಕ್ಷಣ ಕೊಡಿಸಿ, ಮಕ್ಕಳು ಸತತ ಪ್ರಯತ್ನದಿಂದ ಉನ್ನತ ಹುದ್ದೆ ಹೊಂದಿ, ಸಮಾಜ ಗುರುತಿಸುವಂತಾದರೆ ನಿಮ್ಮ ತಂದೆ-ತಾಯಿಗಳಿಗೆ ಗೌರವ ಕೊಟ್ಟ ಹಾಗೆ ಎಂದು ದಿವಾಣಿ ನ್ಯಾಯಾಧೀಶರಾದ ಜ್ಯೋತಿ ಕಾಗಿನಕರ ಅಭಿಪ್ರಾಯಪಟ್ಟರು.

ಡಾ. ಬಿ ಆರ್ ಅಂಬೇಡ್ಕರ ನೋಂದಾಯಿತ ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಸಂಘ, ಕಾನೂನು ಸೇವೆಗಳ ಸಮಿತಿ ಹಾಗೂ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಪಟ್ಟಣದಲ್ಲಿ ಹಮ್ಮಿಕೊಂಡಿದ್ದ ಕಾನೂನು ಅರಿವು-ನೆರವು, ಕಟ್ಟಡ ಕಾರ್ಮಿಕ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಘದ ಸಂಸ್ಥಾಪಕ ಅಧ್ಯಕ್ಷ ಅಡಿವೆಪ್ಪ ಚಲವಾದಿ, ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧ್ಯಕ್ಷ ದೇವಪ್ಪ ಚಿಕ್ಕಣ್ಣವರ ಸಾಂದರ್ಭಿಕವಾಗಿ ಮಾತನಾಡಿದರು. ಮುಖಂಡ ಕೆ ವಿ ಹಂಚಿನಾಳ, ಡಾ. ಕುಮಾರಸ್ವಾಮಿ ಹಿರೇಮಠ, ಕಾರ್ಮಿಕ ಇಲಾಖೆಯ ಜಿಲ್ಲಾಧಿಕಾರಿ ಬಿ ಆರ್ ಜಾದವ, ಪುರಸಭೆಯ ಮುಖ್ಯಾಧಿಕಾರಿ ಎಮ್ ಎ ನೂರುಲ್ಲಾಖಾನ್, ಶರಣಪ್ಪ ಮಾಳೇಕೊಪ್ಪ, ಹುಲಗಪ್ಪ ಬಂಡಿವಡ್ಡರ, ಹನಮಂತಪ್ಪ ಭಜಂತ್ರಿ, ಮಂಜುನಾಥ ಕಟ್ಟಿಮನಿ, ಪ್ರಕಾಶ ದೊಡ್ಡಮನಿ, ಗಣೇಶ ಸವಣೂರ, ಅರ್ಜುನ ಗುಡಿ, ಮುದಕಪ್ಪ ಕಾಯಮ್ಮನವರ, ಯಲ್ಲಪ್ಪ ಭಜಂತ್ರಿ, ಹಸನ ಅಳವಂಡಿ, ತಿಪೇಶ ರಾಯದುರ್ಗ, ನಾಜೀರ ಅರಕೇರಿ, ಮಲ್ಲಪ್ಪ ಕಂಡ್ರೆ, ಯಲ್ಲಪ್ಪ ಬೂದಿಹಾಳ, ಪರುಶುರಾಮ ಬಾಡಲಿ, ಬಾಬುಸಾಬ ಕಮ್ಮಾರ, ಶರಣಪ್ಪ ಮಾಲೇಕೊಪ್ಪ, ಬೀಮರಾವ್ ಹಾದಿಮನಿ, ಸಂಘದ ಪದಾಧಿಕಾರಿಗಳು ಹಾಜರಿದ್ದರು.



ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಉದಯಕುಮಾರ ಯಲಿವಾಳ ಸಂವಿಧಾನ ಪೀಠಿಕೆಯನ್ನು ಓದಿದರು. ಮೋಟಾರ ವಾಹನ ಅಪಘಾತ ಪರಿಹಾರ ಕುರಿತು ತಾಲೂಕು ವಕೀಲರ ಸಂಘದ ಅಧ್ಯಕ್ಷ ಯು ಸಿ ಹಂಪಿಮಠ ಅರಿವು ನೀಡಿದರು. ಕಾರ್ಯಕ್ರಮದಲ್ಲಿ ಕಾರ್ಮಿಕರ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

## ನಿಯಂತ್ರಣ ತಪ್ಪಿ ಮೂರು ದ್ವಿಚಕ್ರ ವಾಹನಗಳ ಮೇಲೆ ಹರಿದ ಲಾರಿ; ಆರು ಮಂದಿ ಸಾವು, 9 ಜನರಿಗೆ ಗಾಯ

■ವಿಜಯಸಾಕ್ಷಿ ಸುದ್ದಿ, ಚೆನ್ನೈ

ಟಿಪ್ಪರ್ ಲಾರಿ ಚಾಲಕನ ನಿಯಂತ್ರಣ ತಪ್ಪಿ ದ್ವಿಚಕ್ರ ವಾಹನಗಳಿಗೆ ಡಿಕ್ಕಿ ಹೊಡೆದ ಪರಿಣಾಮ ಆರು ಮಂದಿ ಸಾವನ್ನಪ್ಪಿ 9 ಜನ ಗಾಯಗೊಂಡಿರುವ ಘಟನೆ ತಮಿಳುನಾಡಿನ ಚೆಂಗಲ್ಪಟ್ಟುದಲ್ಲಿ ನಡೆದಿದೆ.

ತಮಿಳುನಾಡಿನ ಚೆಂಗಲ್ಪಟ್ಟುದಲ್ಲಿ ಶುಕ್ರವಾರ ಸಂಭವಿಸಿದ ಅಪಘಾತದಲ್ಲಿ ಕನಿಷ್ಠ ಆರು ಜನರು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೊದಲು ದ್ವಿಚಕ್ರ ವಾಹನಗಳಿಗೆ ಡಿಕ್ಕಿ ಹೊಡೆದು ನಂತರ ಪಾದಚಾರಿಗಳಿಗೂ ಗುದ್ದಿದೆ, ಪರಿಣಾಮ ಒಂಬತ್ತು ಮಂದಿ ಗಾಯಗೊಂಡಿದ್ದು, ಅವರನ್ನು ಜಿಲ್ಲಾಸ್ಪತ್ರೆ ಸೇರಿದಂತೆ ವಿವಿಧ ಆಸ್ಪತ್ರೆಗಳಲ್ಲಿ ದಾಖಲಾಗಿದ್ದಾರೆ. ಇದರಲ್ಲಿ ಮೂವರ ಸ್ಥಿತಿ ಚಿಂತಾಜನಕವಾಗಿದೆ.

ಅತೀ ವೇಗದಲ್ಲಿ ಬಂದ ಲಾರಿ ಒಂದರ ಹಿಂದೆ ಒಂದರಂತೆ ಮೂರು ದ್ವಿಚಕ್ರ ವಾಹನಗಳಿಗೆ ಡಿಕ್ಕಿ ಹೊಡೆದಿದೆ. ಟಿಪ್ಪರ್ ಲಾರಿ ವಾಹನಗಳಿಗೆ ಮಾತ್ರವಲ್ಲದೆ ಪಾದಚಾರಿಗಳಿಗೂ ಡಿಕ್ಕಿ ಹೊಡೆದಿದ್ದು, ಒಂಬತ್ತು ಮಂದಿ ಗಾಯಗೊಂಡಿದ್ದಾರೆ.




ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಮೂವರ ಸ್ಥಿತಿ ಚಿಂತಾಜನಕವಾಗಿದೆ ಎನ್ನಲಾಗಿದೆ. ಅಪಘಾತಕ್ಕೆ ಕಾರಣವಾದ ಲಾರಿ ಚಾಲಕ ತಲೆಮರೆಸಿಕೊಂಡಿದ್ದು, ಆತನನ್ನು ಪತ್ತೆ ಹಚ್ಚಲಾಗುತ್ತಿದೆ ಎಂದು ಚೆಂಗಲ್ಪಟ್ಟು ಪೊಲೀಸ್ ಮೂಲಗಳು ತಿಳಿಸಿವೆ.

## ಸಿಎಂ ಸಿದ್ಧರಾಮಯ್ಯನವರ ಜನ್ಮದಿನಾಚರಣೆ: ವಿವಿಧ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ 76ನೇ ಜನ್ಮದಿನದ ಅಂಗವಾಗಿ ಶನಿವಾರ ಇಲ್ಲಿನ ಸಿದ್ಧರಾಮಯ್ಯನವರ ಅಭಿಮಾನಿ ಬಳಗದ ವತಿಯಿಂದ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಸಿದ್ಧರಾಮಯ್ಯನವರ ದೀರ್ಘಕಾಲದ ಒಡನಾಡಿ, ಮಾಜಿ ಮೇಯರ್ ದಾನಪ್ಪ ಕಬ್ಬೇರ ಅವರ ಮುಖಂಡತ್ವದಲ್ಲಿ ಬೆಳಗ್ಗೆ 10.30ಕ್ಕೆ ಹನಮಂತ ನಗರದಲ್ಲಿ ಸಸಿ ನೆಡುವ ಕಾರ್ಯಕ್ರಮ, 11 ಗಂಟೆಗೆ ರೇಲ್ವೆ ನಿಲ್ದಾಣ ರಸ್ತೆಯಲ್ಲಿರುವ ಎಚ್‌ಡಿಎಂಸಿ ಕಾಂಪ್ಲೆಕ್ಸ್‌ನಲ್ಲಿ (ತಹಸೀಲ್ದಾರ ಕಚೇರಿ ಪಕ್ಕ) ಮುಖ್ಯಮಂತ್ರಿಗಳ ಗ್ಯಾರಂಟಿ ಯೋಜನೆಗಳನ್ನು ಜನತೆಗೆ ತಲುಪಿಸುವ ಸಹಾಯವಾಣಿ ಕಾರ್ಯಾಲಯದ ಉದ್ಘಾಟನೆ ಮತ್ತು 11.30ಕ್ಕೆ ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಬಡವರ ಬಗ್ಗೆ ಸಿದ್ಧರಾಮಯ್ಯನವರ ಸೈದ್ಧಾಂತಿಕ ನಿಲುವಿನ ಕುರಿತು ಚಿಂತನಾ ಕಾರ್ಯಕ್ರಮ ಜರುಗಲಿದೆ. ಇದೇ ಸಂದರ್ಭದಲ್ಲಿ ಮಹಿಳೆಯರಿಗೆ ಬಟ್ಟೆ ವಿತರಣೆ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರಿಗೆ ಸನ್ಮಾನ ಕಾರ್ಯಕ್ರಮ ನೆರವೇರುವುದು.



ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದು, ಹು-ಧಾ ಮಹಾನಗರ ಜಿಲ್ಲಾಧ್ಯಕ್ಷ ಅಲ್ತಾಫ್ ಹಳ್ಳೂರ ಅಧ್ಯಕ್ಷತೆವಹಿಸಲಿದ್ದು, ಶಾಸಕರಾದ ವಿನಯ ಕುಲಕರ್ಣಿ, ಪ್ರಸಾದ ಅಬ್ಬಯ್ಯ, ಎನ್ ಎಚ್ ಕೋನರಡ್ಡಿ, ಕಾಂಗ್ರೆಸ್ ಮುಖಂಡರಾದ ದೀಪಕ ಚಿಂಚೋರೆ, ಇಸ್ಮಾಯಿಲ್ ತಮಟಗಾರ, ರಾಜ್ಯ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷ ಬಸವರಾಜ ಗುರಿಕಾರ, ಪಾಲಿಕೆಯ ಪ್ರತಿಪಕ್ಷ ನಾಯಕಿ ಸುವರ್ಣ ಕಲ್ಲಕುಂಟ್ಲ ಅತಿಥಿಗಳಾಗಿ ಆಗಮಿಸುವರು.

ಸಿದ್ಧರಾಮಯ್ಯನವರ ಅಭಿಮಾನಿಗಳು, ಪಕ್ಷದ ಮುಖಂಡರು ಮತ್ತು ಹಿತೈಷಿಗಳು ಅಧಿಕ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ದಾನಪ್ಪ ಕಬ್ಬೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲುಷಿತ ನೀರು ಸೇವಿಸಿ ಜನರು ಅಸ್ವಸ್ಥ; ಕಾವಾಡಿಗರ ಹಟ್ಟಿಗೆ ಲೋಕಾಯುಕ್ತ ನ್ಯಾಯಮೂರ್ತಿ ಭೇಟಿ, ಪರಿಶೀಲನೆ

■ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ

ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರಿಂದು ಕಲುಷಿತ ನೀರು ಸೇವಿಸಿ ಜನರು ಅಸ್ವಸ್ಥಗೊಂಡಿದ್ದ ಕವಾಡಿಗರ ಹಟ್ಟಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಇದೇ ವೇಳೆ ಜನರಿಂದ ಅಹವಾಲು ಸ್ವೀಕರಿಸಿದ ಲೋಕಾಯುಕ್ತರು, ಶೌಚಾಲಯ ಸೇರಿದಂತೆ ಸೂಕ್ತ ಮೌಲ ಸೌಲಭ್ಯ ಕಲ್ಪಿಸುವಂತೆ ನಗರಸಭೆ ಪೌರಾಯುಕ್ತರಿಗೆ ಸೂಚನೆ ನೀಡಿದರು.

ತಾತ್ಕಾಲಿಕ ಆಸ್ಪತ್ರೆಗೂ ಭೇಟಿ ನೀಡಿದ ಲೋಕಾಯುಕ್ತರು, ಅಲ್ಲಿ ವೈದ್ಯರು ಇರದೆ, ಶುಶ್ರೂಷಕರು ಮಾತ್ರ ಇರುವುದನ್ನು ಕಂಡು ಗರಂ ಆದರು. ಜನರಿಗೆ ಉತ್ತಮ ವೈದ್ಯಕೀಯ ಸೇವೆ ಒದಗಿಸುವಂತೆ ತಿಳಿಸಿದರು.



ನಂತರ ನಗರದ ವಿವಿಧೆಡೆ ಸಂಚರಿಸಿದ ನ್ಯಾಯಮೂರ್ತಿ, ಕಸದ ರಾಶಿ ಕಂಡು ಅಧಿಕಾರಿಗಳನ್ನು ತರಾಟೆಗೆ ತೆಗದುಕೊಂಡರು. ಜಿಲ್ಲಾಸ್ಪತ್ರೆ ಹಾಗೂ ಬಸವೇಶ್ವರ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ಭೇಟಿ ನೀಡಿ ಕಲುಷಿತ ನೀರು ಕುಡಿದು ಅಸ್ವಸ್ಥರಾದವರ ಆರೋಗ್ಯ ವಿಚಾರಿಸಿದರು.

### ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ ಗದಗ ಜಿಲ್ಲಾ ಸಮಿತಿ ವತಿಯಿಂದ ಮನವಿ

# ರಾಷ್ಟ್ರಪತಿಗಳು ಮಧ್ಯ ಪ್ರವೇಶಿಸಿ ಬೇಡಿಕೆಗಳನ್ನು ಈಡೇರಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ರೈತ ಕಾರ್ಮಿಕ ವಿರೋಧಿ ನೀತಿಗಳನ್ನು ಕೈಬಿಡಲು ಒತ್ತಾಯಿಸಿ ಆಗಸ್ಟ್-ಕ್ವಿಟ್ ಇಂಡಿಯಾ ಚಳುವಳಿ ದಿನದಂದು ಕಾರ್ಮಿಕ ಸಂಘಟನೆಗಳಿಂದ ಕೇಂದ್ರ ಸರ್ಕಾರದ ವಿರುದ್ಧ, ಗದಗ ತಹಸೀಲ್ದಾರರ ಮೂಲಕ ಸಿಐಟಿಯು ಗದಗ ಜಿಲ್ಲಾ ಸಮಿತಿಯ ವತಿಯಿಂದ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಕಾರ್ಮಿಕ ಮುಖಂಡರು, ಕಳೆದ 9 ವರ್ಷಗಳ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ನಡೆಯು ಜನಸಾಮಾನ್ಯರ ಜೀವನ ಮತ್ತು ಜೀವನೋಪಾಯದ ಮೇಲೆ ಮರಣಾಂತಿಕ ದಾಳಿಯನ್ನೆಸಗಿದೆ. ನಿರುದ್ಯೋಗ ಪೆಡಂಭೂತದಂತೆ ಹೆಚ್ಚುತ್ತಿದೆ. ಬಡತನ ಹೆಚ್ಚಳವಾಗಿ ಆರ್ಥಿಕ ಕುಸಿತ ತಲೆದೋರಿದ್ದು, ನಿರುದ್ಯೋಗ ಹೆಚ್ಚಳದಿಂದಾಗಿ ಯುವಕರು ಹತಾಶರಾಗಿದ್ದಾರೆ. ಕೇಂದ್ರ ಸರ್ಕಾರದ ಅಧೀನದಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಬಿದ್ದಿವೆ. ಸಾರ್ವಜನಿಕ ಉದ್ದಿಮೆಗಳನ್ನು ಬಿಡಿಗಾಸಿಗೆ ಖಾಸಗಿಯವರಿಗೆ ಮಾರಾಟ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಕಾರ್ಮಿಕರ ಮುಖಂಡರಾದ ಮಹೇಶ ಹಿರೇಮಠ, ಮಾರುತಿ ಚಿಟಗಿ, ಬಸವರಾಜ ಮಂತೂರ, ಮೈಬೂಬ ಹವಾಲ್ದಾರ, ಯಶೋಧಾ ಬೆಟಗೇರಿ, ನಾಗರತ್ನ ಬಡಿಗಣ್ಣವರ, ಯಮುನಾ ಗೋಟೂರ, ಸುಶೀಲ ಚಲವಾದಿ, ಮೀನಾಕ್ಷಿ ಹುಯಿಲಗೋಳ, ಸುಪ್ರೀತಾ , ಕನಕಪ್ಪಾ ಹಾದಿಮನಿ, ರಾಧಾ ಹಿರೇಮಠ, ಚನ್ನಮ್ಮಜಿ ಶ್ಯಾವಿ, ಕೇಶಮ್ಮ , ಗಂಗಮ್ಮ ಕನಾಪುರ, ಸುನಂದ ಶ್ಯಾವಿ, ನೀಲಾಂಬಿಕಾ ಯಚಲಗಾರ, ಚೇತನಾ ಸುರಳಿಯವರ, ಹಸೀನಾ ಶಿರಹಟ್ಟಿ, ಹಾಲವ್ವ ಪೂಜಾರ, ರೇಣುಕಾ ಪಾಟೀಲ, ನಾಗವೇಣಿ ನಾಶಿ, ಪ್ರಭಾವತಿ ಕಾಮಗಿರಿ, ಬೀಬಿಜಾನ, ಲಕ್ಷ್ಮವ್ವ ಹೇಮಾವತಿ ಭಜಂತ್ರಿ, ನಜ್ಮಾ, ಸರಿತಾ ಇನಾಮತಿ, ಗಿರಿಜಾ ಪಲ್ಲೇದ, ವಿಮಲಾ ನಾಯ್ಕರ, ಮಾಬೂಬಿ ನಡುವಿನದೊಡ್ಡಿ, ಕುಮಾರ ಹಡಪದ, ರಾಘವೇಂದ್ರ ಮಾದರ, ಬಸವರಾಜ ಅರ್ಕಸಾಲಿ, ದೇವಪ್ಪ ಕಲ್ಮನಿ, ಶಾಂತಮ್ಮ ಬಾಗೂರ, ಬಸವರಾಜ ಮಂತೂರ, ಫಕ್ಕೀರೇಶ ಮಾಗಡಿ ಉಪಸ್ಥಿತಿರಿದ್ದರು.

ಹೋರಾಟದ ಮುಂದುವರಿಕೆಯಾಗಿ, ಕೇಂದ್ರ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ವಿವಿಧ ಹಂತಗಳಲ್ಲಿ ರಾಷ್ಟ್ರವ್ಯಾಪಿ ಹೋರಾಟ ನಡೆಸಲು ಸಜ್ಜಾಗಿವೆ. ಇದರ ಭಾಗವಾಗಿ ಇಂದು ಇಂಡಿಯಾ ದಿನದಂದು ದೇಶದಾದ್ಯಂತ ಎಲ್ಲಾ ಜಿಲ್ಲಾ ಕೇಂದ್ರ ಮತ್ತು ರಾಜಧಾನಿಗಳಲ್ಲಿ ಧರಣಿಯನ್ನು ನಡೆಸಿ ಈ ಮನವಿಯನ್ನು ಸಲ್ಲಿಸಿ ರಾಷ್ಟ್ರಪತಿಗಳು ಮಧ್ಯ ಪ್ರವೇಶಿಸಿ ಕೇಂದ್ರ ಸರಕಾರ ಕಾರ್ಮಿಕ ಸಂಘಟನೆಗಳ ಬೇಡಿಕೆಗಳನ್ನು ಈಡೇರಿಸಬೇಕೆಂದು ವಿನಂತಿಸಿದರು.

## ಸಾವಿನಲ್ಲೂ ಸಾರ್ಥಕತೆ ; ಆರು ಜನರ ಬಾಳಿಗೆ ಬೆಳಕಾದ ನಾಗಮಂಗಲದ ಯುವಕ..!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಾಗಮಂಗಲದ ಯುವಕನೊಬ್ಬ ಸಾವಿನಲ್ಲೂ ಸಾರ್ಥಕತೆ ಮೆರೆದಿದ್ದು, ಆರು ಜನರ ಬಾಳಿಗೆ ಬೆಳಕಾಗಿದ್ದಾನೆ. ಮಗನ ಸಾವಿನಲ್ಲೂ ಪೋಷಕರು ಅಂಗಾಂಗ ದಾನ ಮಾಡಲು ಒಪ್ಪಿಗೆ ನೀಡಿದ್ದಾರೆ.

ಕಳೆದ ತಿಂಗಳು ಆಕ್ಸಿಡೆಂಟ್‌ನಲ್ಲಿ ದೀಕ್ಷಿತ್ ತಲೆಗೆ ಪೆಟ್ಟುಬಿದ್ದಿತ್ತು. ದೀಕ್ಷಿತ್ BGS ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ. ಚಿಕಿತ್ಸೆ ಫಲಿಸದಿದ್ದಾಗ ಮಗನ ಅಂಗಾಂಗ ದಾನ ಮಾಡಲು ನಿರ್ಧಾರ ಮಾಡಿದ್ದಾರೆ. ದೀಕ್ಷಿತ್‌ನ ಕಣ್ಣು, ಕಿಡ್ನಿ, ಲಿವರ್ ಹಾಗೂ ಹೃದಯ ದಾನ ಮಾಡಲಾಗುವುದು. ಖಾಸಗಿ ಆಸ್ಪತ್ರೆಯಲ್ಲಿ ದೀಕ್ಷಿತ್ ಅಂಗಾಗ ದಾನ ಪ್ರಕ್ರಿಯೆ ನಡೆದಿದೆ.


## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.

ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..

ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.

E-mail: vijayasakshidaily@gmail.com

ಮೊ : 9019256545

# ಸ್ವಾತಂತ್ರ್ಯೋತ್ಸವ ದಿನಾಚರಣೆ

▶▶ ಮೊದಲನೇ ಪುಟದಿಂದ

ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು. ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸರ್ವರಿಗೂ ಸ್ವಾಗತ ಕೋರಿದ್ದಾರೆ.

2023ರ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮಗಳು

ಅಂದು ಬೆಳಿಗ್ಗೆ 9 ಗಂಟೆಗೆ ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅವರು ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸುವರು. ತದನಂತರ ರಾಷ್ಟ್ರಗೀತೆ, ನಾಡಗೀತೆ, ಪರೇಡ್ ವೀಕ್ಷಣೆ, ಪಥ ಸಂಚಲನ ಮತ್ತು ವಂದನೆ ಸ್ವೀಕಾರ, ಸ್ವಾತಂತ್ರ್ಯೋತ್ಸವದ ಸಂದೇಶ, ಸಾಧಕರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

## ಆ.13 ರಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರ ಜಿಲ್ಲಾ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ ಅವರು ಆಗಸ್ಟ್ 13 ರಂದು ಧಾರವಾಡ ಜಿಲ್ಲಾ ಪ್ರವಾಸ ಕೈಗೊಳ್ಳುವರು.

ಅಂದು ಬೆಳಿಗ್ಗೆ 5.50 ಕ್ಕೆ ಬೆಂಗಳೂರಿನಿಂದ ಹುಬ್ಬಳ್ಳಿ ರೈಲ್ವೆ ನಿಲ್ದಾಣಕ್ಕೆ ಬಂದು ತಲುಪುವರು. ಬೆಳಿಗ್ಗೆ 10 ಗಂಟೆಗೆ ಆರ್.ಎನ್.ಶೆಟ್ಟಿ ಕಲ್ಯಾಣ ಮಂಟಪದಲ್ಲಿ ಧಾರವಾಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಮ್ಮಿಕೊಂಡಿರುವ ಪತ್ರಿಕಾ ದಿನಾಚರಣೆ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ 11.30 ಕ್ಕೆ ಅಣ್ಣಿಗೇರಿಯ ಪಂಪ ಭವನದಲ್ಲಿ ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಯುವ ಸೇನೆ ಕರ್ನಾಟಕ ವತಿಯಿಂದ ಸ್ವಾತಂತ್ರ್ಯೋತ್ಸವ ಹಾಗೂ ರಾಯಣ್ಣೋತ್ಸವ ಕಾರ್ಯಕ್ರಮದ ಅಂಗವಾಗಿ ಆಯೋಜಿಸಿರುವ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಸಂಜೆ 4 ಗಂಟೆಗೆ ಹುಬ್ಬಳ್ಳಿಯಿಂದ ಬೆಂಗಳೂರಿಗೆ ರಸ್ತೆ ಮೂಲಕ ಮರಳಿ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಬಾಲೆಹೊಸೂರಿನ ಕೆರೆಗೆ ಹರಿಯದ ವರದೆ / ಸಾಕಾರಗೊಳ್ಳದ 9.40 ಕೋಟಿ ರೂ ಯೋಜನೆ

# ಗಂಡ-ಹೆಂಡಿರ ಜಗಳದಲ್ಲಿ ಬಡವಾಗುತ್ತಿರುವ ಕೂಸು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ





ತಾಲೂಕಿನ ಬಾಲೇಹೊಸೂರಿನ 3 ಕೆರೆಗಳಿಗೆ ವರದಾ ನದಿಯಿಂದ ನೀರು ತುಂಬಿಸುವ ಸುಮಾರು 9.40 ಕೋಟಿ ರೂ ವೆಚ್ಚದ ಯೋಜನೆ 6 ವರ್ಷವಾದರೂ ಸಾಕಾರಗೊಂಡಿಲ್ಲ. ಕೆರೆಗೆ ನೀರು ಹರಿಸುವ ಭಗೀರತ ಪ್ರಯತ್ನಕ್ಕಾಗಿ ಹೋರಾಡಿದ ಬಾಲೇಹೊಸೂರಿನ ಶ್ರೀ ದಿಂಗಾಲೇಶ್ವರ ಮಹಾಸ್ವಾಮಿಗಳು ನಮ್ಮೂರ ಕೆರೆಗೆ ನದಿ ನೀರು ಹರಿದು ಬರುತ್ತದೆ ಎಂಬ ಸಂತಸದಿಂದ ತಮ್ಮ ಸ್ವಂತ ಖರ್ಚಿನಲ್ಲಿ ಕೆರೆಯ ಹೂಳೆತ್ತುವ ಕಾರ್ಯ ಕೈಗೊಂಡಿದ್ದರು. ಯೋಜನೆಗೆ ಅನುದಾನ ತಂದ ಮಾಜಿ ಶಾಸಕ ಮತ್ತು ಮುಖ್ಯಮಂತ್ರಿಗಳ ಸಂಸದೀಯ ಕಾರ್ಯದರ್ಶಿಯಾಗಿದ್ದ ರಾಮಕೃಷ್ಣ ದೊಡ್ಡಮನಿ, ಕೆರೆ ಅಭಿವೃದ್ಧಿ ಸಮಿತಿ ಅಧ್ಯಕ್ಷ ಬಸವರೆಡ್ಡಿ ಹನಮರೆಡ್ಡಿ ಮತ್ತು ಗ್ರಾಮಸ್ಥರನ್ನೊಳಗೊಂಡ ಪಾದಯಾತ್ರೆಯ ಹೋರಾಟವೂ ನಿರರ್ಥಕವಾಗಿ, ಗ್ರಾಮಸ್ಥರ ನೀರಿನ ಬವಣೆ ತಪ್ಪದಂತಾಗಿದೆ. ಕೋಟ್ಯಾಂತರ ರೂ ಯೋಜನೆ ಹೊಳೆಯಲ್ಲಿ ಹೋಮ ಮಾಡಿದಂತಾಗುತ್ತದೆಯೋ ಎಂಬ ಆತಂಕ ಈ ಭಾಗದ ಜನರನ್ನು ಕಾಡುತ್ತಿದೆ.

ವರದಾ ನದಿಯಿಂದ ಬಾಲೆಹೊಸೂರ ಗ್ರಾಮದ 3 ಕೆರೆಗಳಿಗೆ 9.40 ಕೋಟಿ ರೂ ಅನುದಾನದಲ್ಲಿ ಪೈಪ್‌ಲೈನ್ ಮೂಲಕ ನೀರು ತುಂಬಿಸುವ ಮಹತ್ವಾಕಾಂಕ್ಷಿ ಯೋಜನೆ ಇದಾಗಿದೆ. ಸಣ್ಣ ನೀರಾವರಿ ಇಲಾಖೆಗೆ 2016ರ ಬಜೆಟ್‌ನಲ್ಲಿ ಅನುದಾನ ಮೀಸಲಿರಿಸಿದ್ದ ಸಿಎಂ ಸಿದ್ಧರಾಮಯ್ಯ, 2017ರ ಡಿಸೆಂಬರ್ 25ರಂದು ಯೋಜನೆಗೆ ಚಾಲನೆ ನೀಡಿದ್ದರು. ಮಂಗಳೂರು ಮೂಲದ ಓಸಿಯನ್ ಕನ್ಸ್ಟ್ರಕ್ಷನ್ ಕಂಪನಿಯವರು ಕಾಮಗಾರಿ ಗುತ್ತಿಗೆ ಪಡೆದ್ದರು. ವರದಾ ನದಿ ತಟದ ಮರಡೂರ ಹತ್ತಿರದ ಜಾಕ್‌ವೆಲ್‌ನಿಂದ ಪ್ರಾರಂಭಗೊಂಡಿರುವ ಒಟ್ಟು 14 ಕಿ.ಮೀ ಪೈಪ್‌ಲೈನ್ ಕಾಮಗಾರಿ 6 ವರ್ಷಗಳಿಂದ ಕುಂಟುತ್ತಾ ಸಾಗಿ, ಈ ಮಳೆಗಾಲಕ್ಕೂ ಕೆರೆ ನೀರು ಹರಿಯಲೇ ಇಲ್ಲ. ಆದರೆ ಗುತ್ತಿಗೆದಾರರು ಬಹುತೇಕ ಬಿಲ್ ಪಡೆದುಕೊಂಡಿದ್ದಾರೆ.

ಗಂಡ-ಹೆಂಡಿರ ಜಗಳ ನಡುವೆ ಕೂಸು ಬಡವಾಯ್ತು ಎಂಬಂತೆ, ಗುತ್ತಿಗೆದಾರರ ಮತ್ತು ಇಲಾಖೆಯ ಇಂಜಿನಿಯರ್‌ಗಳ ನಡುವಿನ ಹಗ್ಗ ಜಗ್ಗಾಟದಿಂದ ನದಿಗೆ ನೀರು ಹರಿಯುತ್ತಿಲ್ಲ ಎಂಬ ಮಾತು ಕೇಳಿಬರುತ್ತಿದೆ. ಮುಂಗಾರಿನ ಕೊರತೆಯಿಂದ 3 ಕೆರೆಗಳು ಖಾಲಿಯಿದ್ದು, ವರದೆಯ ಬರುವಿಕೆಗಾಗಿ ಕಾಯುತ್ತಿವೆ. ನಿಗದಿಯಂತೆ ಕಾಮಗಾರಿ ಮುಗಿದಿದ್ದರೆ 4 ವರ್ಷಗಳಿಂದ ಗ್ರಾಮದ ಕೆರೆಗಳಿಗೆ ನೀರು ಹರಿದು ಬರಬೇಕಿತ್ತು. ದುರ್ದೈವದ ಸಂಗತಿಯೆಂದರೆ, ನದಿಯಲ್ಲಿ ನೀರು ಪ್ರವಹಿಸುವ ವೇಳೆ (ಪ್ರತಿ ವರ್ಷ ಜೂನ್ ತಿಂಗಳಿಂದ ಸೆಪ್ಟಂಬರ್‌ವರೆಗೆ) ಮಾತ್ರ ಜಾಕ್‌ವೆಲ್‌ನಿಂದ ನೀರೆತ್ತಲು ಅವಕಾಶವಿದೆ. ಈ ವರ್ಷವೂ ಸೆಪ್ಟಂಬರ್‌ವರೆಗೆ ಹೇಗಾದರೂ ಮುಂದೂಡುತ್ತಾ ಬಂದು ಜಾರಿಕೊಳ್ಳುವ ತಂತ್ರದಲ್ಲಿ ಅಧಿಕಾರಿ ಮತ್ತು ಗುತ್ತಿಗೆದಾರರಿದ್ದಾರೆ.

> ಗುತ್ತಿಗೆದಾರರ ನಿರ್ಲಕ್ಷದಿಂದ ಕಾಮಗಾರಿ ಪೂರ್ಣಗೊಳ್ಳಲು ವಿಳಂಬವಾಗಿದೆ. ಸದ್ಯ ಕಾಮಗಾರಿ ಪೂರ್ಣಗೊಂಡು, ಪ್ರಾಯೋಗಿಕ ಪರೀಕ್ಷೆ ಮಾಡಲಾಗಿದೆ. ಗುತ್ತಿಗೆದಾರರು ಕೆಲ ತಾಂತ್ರಿಕ ತೊಂದರೆಗಳನ್ನು ಸರಿಪಡಿಸಿ ಇಲಾಖೆಗೆ ಹಸ್ತಾಂತರಿಸಿಲ್ಲ. ಈ ಬಗ್ಗೆ ಗುತ್ತಿಗೆದಾರರಿಗೆ ಅನೇಕ ಬಾರಿ ಮೌಖಿಕವಾಗಿ ಹೇಳಲಾಗಿದೆಯಲ್ಲದೇ ನೊಟೀಸ್ ನೀಡಲಾಗಿದೆ. ಈ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಈ ತಿಂಗಳಲ್ಲಿ ಕೆರೆಗಳಿಗೆ ನದಿ ನೀರು ಹರಿಸುವ ಕಾರ್ಯ ಪ್ರಾರಂಭಿಸಲಾಗುವುದು.
>
> **– ಚಂದ್ರಶೇಖರ.**
> ಸಣ್ಣ ನೀರಾವರಿ ಇಲಾಖೆ ಸಹಾಯಕ ಇಂಜಿನಿಯರ್.

> ಬಾಲೆಹೊಸೂರ ಗ್ರಾಮ ವರದಾ ಮತ್ತು ತುಂಗಭದ್ರಾ ನದಿಯಿಂದ ಕೇವಲ 10 ಕಿ.ಮೀ ಅಂತರಲ್ಲಿದ್ದರೂ ವರ್ಷಪೂರ್ತಿ ನೀರಿಗಾಗಿ ಪರಿತಪಿಸಬೇಕಾದ ಸ್ಥಿತಿಯಿದೆ. ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ವರದಾ ನದಿಯಿಂದ ನಮ್ಮೂರಿನ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಜಾರಿಗೊಳಿಸಿತ್ತು. ಅದರೆ ಬಿಜೆಪಿ ಸರ್ಕಾರ 5 ವರ್ಷ ಪೂರ್ಣಗೊಳಿಸಿದರೂ ನದಿ ನೀರು ಹರಿಯಲೇ ಇಲ್ಲ. ಇಂಜಿನಿಯರ್ ಮತ್ತು ಗುತ್ತಿಗೆದಾರರ ನಡುವಿನ ಮುಸುಕಿನ ಗುದ್ದಾಟದಿಂದ ಬಾಲೆಹೊಸೂರಿನ ನೀರಿನ ಬವಣೆ ತಪ್ಪುತ್ತಿಲ್ಲ. ಜಿಲ್ಲಾಧಿಕಾರಿಗಳು ನೀರು ಹರಿಸುವ ಕಾರ್ಯಕ್ಕೆ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರೆ, ಕನಿಷ್ಠಪಕ್ಷ ಸೆಪ್ಟಂಬರ್‌ವರೆಗಾದರೂ ನೀರು ಹರಿದು ಬರುತ್ತದೆ. ಕೆರೆ ನೀರು ತುಂಬಿದರೆ ಅಂತರ್ಜಲ ಮಟ್ಟ ಹೆಚ್ಚಿ ,ಬೋರ್‌ವೆಲ್ ನೀರಿನ ಮಟ್ಟ ಸಮತೋಲನದಲ್ಲಿರುತ್ತದೆ.
>
> **– ಬಸವರೆಡ್ಡಿ ಹನಮರೆಡ್ಡಿ.**
> ಕೆರೆ ಅಭಿವೃದ್ಧಿ ಸಮಿತಿ ಸಂಚಾಲಕ.

# ಗ್ಯಾರಂಟಿ ಜಾರಿಯಿಂದ ರಾಜ್ಯದ ಜಿಡಿಪಿ ಹೆಚ್ಚಳ

▶▶ ಮೊದಲನೇ ಪುಟದಿಂದ

ರೂಪಾಯಿ ನೀಡುವ ಗೃಹಲಕ್ಷ್ಮೀ ಯೋಜನೆ ದೇಶದಲ್ಲೇ ಅಪರೂಪದ ಯೋಜನೆಯಾಗಿದೆ. ವರ್ಷಕ್ಕೆ 35 ಸಾವಿರ ಕೋಟಿ ರೂಪಾಯಿ ಇದಕ್ಕೆ ವಿನಿಯೋಗಿಸಲಾಗುವುದು ಎಂದರು.

ಗ್ಯಾರಂಟಿ ಅನುಷ್ಠಾನ ಸೇರಿದಂತೆ ಸರಕಾರದ ಸಾಧನೆಯು ವಿರೋಧ ಪಕ್ಷವನ್ನು ಕಂಗೆಡಿಸಿದೆ. ಏನೇ ಆದರೂ ಸರಕಾರ ನೀಡಿರುವ ಎಲ್ಲ ಭರವಸೆಗಳನ್ನು ಈಡೇರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಚುನಾವಣಾ ಸಂದರ್ಭದಲ್ಲಿ ನೀಡಲಾದ ಪ್ರತಿಯೊಂದು ಭರವಸೆಗಳನ್ನು ಸರಕಾರ ಈಡೇರಿಸಲಿದೆ. ನುಡಿದಂತೆ ನಡೆಯುವ ಸರಕಾರ ನಮ್ಮದು ಎಂದರು.

ಐದು ಗ್ಯಾರಂಟಿ ಯೋಜನೆಗಳ ಪೈಕಿ ಮೂರು ಈಗಾಗಲೇ ಈಡೇರಿಸಲಾಗಿದೆ.

ಗೃಹಲಕ್ಷ್ಮೀ ಈ ಮಾಹೆಯಲ್ಲಿ ಜಾರಿಗೆ ತರಲಾಗುತ್ತಿದ್ದು, ಐದನೇ ಗ್ಯಾರಂಟಿ ಯುವ ನಿಧಿ ಯೋಜನೆಯನ್ನು ಡಿಸೆಂಬರ್ ಅಥವಾ ಜನವರಿಯಲ್ಲಿ ಜಾರಿಗೊಳಿಸಲಾಗುವುದು.

ಪ್ರಮುಖ ಸಮಾಜ ಸುಧಾರಕರ ಪೈಕಿ ಬಸವಣ್ಣ ನನಗೆ ಅತ್ಯಂತ ಇಷ್ಟವಾದ ವ್ಯಕ್ತಿ. ಆದ್ದರಿಂದ ಬಸವ ಜಯಂತಿಯ ದಿನ ಪ್ರಮಾಣವಚನ ಸ್ವೀಕರಿಸಿ ನುಡಿದಂತೆ ನಡೆದಿರುತ್ತೇವೆ. ಆದ್ದರಿಂದ ಜನರು ಮತ್ತೇ ಆಶೀರ್ವಾದ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ರಾಜ್ಯದಲ್ಲಿ ಪಶು ಸಂಪತ್ತು ಅಧಿಕವಾಗಿದ್ದು, ಪಶು ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪನೆಯಿಂದ ಜಾನುವಾರುಗಳ ಆರೋಗ್ಯ ರಕ್ಷಣೆ-ಯ ಜತೆಗೆ ಕೃಷಿ ಅಭಿವೃದ್ಧಿಗೆ ಪೂರಕವಾಗಲಿದೆ.

ಸಮಾರಂಭದಲ್ಲಿ ಮಾತನಾಡಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅಥಣಿ ಹಾಗೂ ಕಾಗವಾಡ ಮತಕ್ಷೇತ್ರದ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಎಲ್ಲ ರೀತಿಯ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು. ಅಥಣಿ ಶಾಸಕರ ನೀರಾವರಿ ಯೋಜನೆಗಳ ಕನಸು ದೊಡ್ಡದಾಗಿವೆ. ಇಡೀ ಕ್ಷೇತ್ರದ ಜನರ ಬದುಕು ಹಸನಾಗಿಸಲು ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಅವರು ಬಯಸಿದ್ದಾರೆ. ಈ ಭಾಗದ ಜನರು ಮಾತ್ರವಲ್ಲ; ಜಾನುವಾರುಗಳ ಅನುಕೂಲಕ್ಕಾಗಿ ಪಶು ವೈದ್ಯಕೀಯ ಮಹಾವಿದ್ಯಾಲಯವನ್ನು ಶಾಸಕ ಲಕ್ಷ್ಮಣ ಸವದಿ ಸ್ಥಾಪಿಸುವ ಮೂಲಕ ತಮ್ಮ ಕಳಕಳಿಯನ್ನು ಪ್ರದರ್ಶಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸರಕಾರ ನುಡಿದಂತೆ ನಡೆಯುತ್ತಿದ್ದು, ಐದೂ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೆ ತರಲಾಗುವುದು ಎಂದು ಹೇಳಿದರು. ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಮಾತನಾಡಿ, ಲೋಕಾರ್ಪಣೆಗೊಂಡಿರುವ ಪಶು ವೈದ್ಯಕೀಯ ಮಹಾವಿದ್ಯಾಲಯವು ಮುಂಬರುವ ದಿನಗಳಲ್ಲಿ ರೈತ ಸಮುದಾಯ, ವಿದ್ಯಾರ್ಥಿಗಳು ಹಾಗೂ ಈ ಭಾಗದ ಜಾನುವಾರುಗಳಿಗೆ ಅನುಕೂಲವಾಗಲಿದೆ ಎಂದರು.

ಮಹಾವಿದ್ಯಾಲಯಕ್ಕೆ ಅಗತ್ಯ ಮೂಲಸೌಕರ್ಯವನ್ನು ಒದಗಿಸಲಾಗುವುದು. ಅಥಣಿ ಭಾಗದ ನೀರಾವರಿ ಯೋಜನೆಗಳಿಗೆ ಹೆಚ್ಚಿನ ಅನುದಾನವನ್ನು ಸರಕಾರ ನೀಡಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಹಿಂದಿನ ಆಡಳಿತ ಅವಧಿಯಲ್ಲಿನ ಅಭಿವೃದ್ಧಿ ಪಥದಲ್ಲಿ ಹೊಸ ಸರಕಾರ ಸಾಗಲಿದೆ ಎಂದು ಹೇಳಿದರು. ಇದೇ ವೇಳೆ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಅಥಣಿ ಕ್ಷೇತ್ರದ ಅಭಿವೃದ್ಧಿಯಾಗಬೇಕು ಎಂಬುದು ಶಾಸಕ ಲಕ್ಷ್ಮಣ ಸವದಿ ಅವರ ಏಕೈಕ ಬೇಡಿಕೆಯಾಗಿದೆ ಎಂದರು.

ಐದು ಗ್ಯಾರಂಟಿ ಯೋಜನೆಗಳ ಪೈಕಿ ಈಗಾಗಲೇ ಮೂರು ಗ್ಯಾರಂಟಿ ಅನುಷ್ಠಾನಗೊಳಿಸಲಾಗಿದ್ದು, ಇದೇ ತಿಂಗಳಿನಲ್ಲಿ ಗೃಹಲಕ್ಷ್ಮೀ ಗ್ಯಾರಂಟಿ ಯೋಜನೆ ಜಾರಿಗೆ ತರಲಾಗುವುದು. ಬೆಳಗಾವಿಯಲ್ಲಿ 11 ಲಕ್ಷಕ್ಕೂ ಅಧಿಕ ಫಲಾನುಭವಿಗಳಿಗೆ ಈ ಯೋಜನೆಯ ಲಾಭ ದೊರಕಲಿದೆ ಎಂದು ಹೆಬ್ಬಾಳಕರ್ ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರ ನೇತೃತ್ವದಲ್ಲಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ನಾವೆಲ್ಲರೂ ಬದ್ಧರಾಗಿದ್ದೇವೆ ಎಂದು ಹೇಳಿದರು.

ಭಾಗ್ಯದ ಬಾಗಿಲುಗಳನ್ನು ತೆರದ ಬಳಿಕ ಮೊದಲ ಬಾರಿಗೆ ಆಗಮಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಮ್ಮ ಅಥಣಿ ಮತ ಕ್ಷೇತ್ರದ ಜನರ ಋಣವನ್ನು ತೀರಿಸಲು ಅವಕಾಶ ನೀಡಬೇಕು ಎಂದು ಹೇಳಿದರು.

ಕೃಷಿ ಮಹಾವಿದ್ಯಾಲಯ ಸ್ಥಾಪನೆಗೆ ತಕ್ಷಣಕ್ಕೆ 20 ಕೋಟಿ ಒದಗಿಸಬೇಕು. ಅಥಣಿ ಭಾಗದ ಒಣ ದ್ರಾಕ್ಷಿಯನ್ನು ಸರಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪೌಷ್ಟಿಕಾಹಾರ ತಯಾರಿಕೆಗೆ ಖರೀದಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದು ಶಾಸಕ ಲಕ್ಷ್ಮಣ ಸವದಿ ವಿನಂತಿಸಿದರು.

# ವಾರದ ಸಂತೆ ಸ್ಥಳಾಂತರಕ್ಕೆ ಮನವಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಒತ್ತುವರಿಯಾದ ಇಕ್ಕಟ್ಟಿ ರಸ್ತೆ ನಡುವೆ, ಗ್ರಾಮದ ದೇವಸ್ಥಾನಗಳ ಮತ್ತು ಅಲ್ಲಿನ ಮನೆಗಳ ಬಾಗಿಲಿನ ಎದುರಿಗೆ ಪ್ರತಿ ಸೋಮವಾರ ನಡೆಯುವ ವಾರದ ಸಂತೆಯನ್ನು ಈ ಕೂಡಲೇ ಸೂಕ್ತವಾದ ಸ್ಥಳಕ್ಕೆ ಸ್ಥಳಾಂತರಿಸಬೇಕು ಎಂದು ಭೋವಿ ಸಮಾಜದ ಮಹಿಳಾ ಮುಖ್ಯಸ್ಥೆ ರೇಣವ್ವ ನವಲಗುಂದ ಆಗ್ರಹಿಸಿದರು.

ನರೇಗಲ್ ಪಟ್ಟಣದ ವಾರದ ಸಂತೆಯನ್ನು ಸ್ಥಳಾಂತರಿಸುವ ಕುರಿತು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗೆ ಅವರು ಮನವಿ ಸಲ್ಲಿಸಿದರು.

ಈ ಹಿಂದೆ ನಾಗರಕೆರಯ ರಸ್ತೆ ಬದಿಯಲ್ಲಿ ನಡೆಯುತ್ತಿದ್ದ ವಾರದ ಸಂತೆಯು ಸದ್ಯ ಡಾ. ಜಿ ಕೆ ಕಾಳೆಯವರ ಆಸ್ಪತ್ರೆಯಿಂದ, ಗ್ರಾಮದ ಮಧ್ಯದಲ್ಲಿರುವ ಗಣೇಶ ಗುಡಿಯವರೆಗೆ, ಅಲ್ಲಿಂದ ಬಲಕ್ಕೆ ಗ್ರಾಮ ದೇವತೆ ಗುಡಿವರೆಗೆ, ಎಡಕ್ಕೆ ಆಂಜನೇಸ್ವಾಮಿ ದೇವಸ್ಥಾ ಹಾಗೂ ಹಿಂದುಗಡೆ ಕಲ್ಲಪ್ಪಜ್ಜನ ಗುಡಿಯವರೆಗೆ ನಡೆಯುತ್ತದೆ. ಇಲ್ಲಿನ ರಸ್ತೆಯ ಜಾಗ ಒತ್ತುವರಿಯಾಗಿರುವ ಕಾರಣ ರಸ್ತೆಗಳು ಇಕ್ಕಟ್ಟಾಗಿವೆ. ಅದೇ ಸ್ಥಳದಲ್ಲಿ ಟ್ರಾಕ್ಟರ್ ಟ್ರಾಲಿ, ಬಂಡಿ ಸೇರಿದಂತೆ ಇತರೆ ವಾಹನಗಳನ್ನು ಅಲ್ಲಲ್ಲಿ ನಿಲ್ಲಿಸುವ ಕಾರಣ ವಾರದ ಸಂತೆಯಿಂದ ಸಾರ್ವಜನಿಕರು ತೊಂದರೆ ಎದುರಿಸುವಂತಾಗಿದೆ. ಸಂತೆಯ ಸಮಯವನ್ನು ಬದಲಾವಣೆ ಮಾಡಬೇಕು ಮತ್ತು ಮಹಿಳಾ ಸುರಕ್ಷತೆ ಮತ್ತು ಕಳ್ಳತನಗಳನ್ನು ನಿಲ್ಲಿಸುವ ದೃಷ್ಟಿಯಿಂದ ಈ ಕೂಡಲೇ ವಾರದ ಸಂತೆಯನ್ನು ಸ್ಥಳಾಂತರಿಸಬೇಕು ಎಂದರು.

ಈ ವೇಳೆ ಸದ್ದಾಂ ನಶೇಖಾನ್, ಸಂತೋಷ ಸಾತನೂರ, ನಾಗೇಶ ಇಟಗಿ, ವಿಜಯ, ಸಮೀರ ಗೌಡರ, ಕಿರಣ ಮಾವಿನಕಾಯಿ, ಕುಬೇರಗೌಡ ಮೆಣಸಿನಕಾಯಿ ಇದ್ದರು.

## ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಅಗ್ನಿ ಅವಘಡ; 9 ಇಂಜಿನಿಯರ್‌ಗಳಿಗೆ ಗಾಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ(ಬಿಬಿಎಂಪಿ)ಯ ಕೇಂದ್ರ ಕಚೇರಿಯ ಆವರಣದ ಕಟ್ಟಡವೊಂದರಲ್ಲಿ ಶುಕ್ರವಾರ ಸಂಜೆ ಅಗ್ನಿ ಅವಘಡ ಸಂಭವಿಸಿದ್ದು, 9ಕ್ಕೂ ಹೆಚ್ಚು ನೌಕರರು ಗಾಯಗೊಂಡಿದ್ದಾರೆ.

ಇಂದು ಸಂಜೆ ಗುಣಮಟ್ಟ ನಿಯಂತ್ರಣ ವಿಭಾಗದ ಲ್ಯಾಬ್ ಮತ್ತು ಕಚೇರಿ ಕಟ್ಟಡದಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡಿದೆ.

ತಕ್ಷಣ ಅಗ್ನಿಶಾಮಕ ಸಿಬ್ಬಂದಿಗೆ ಮಾಹಿತಿ ನೀಡಿದರೂ ಘಟನಾ ಸ್ಥಳಕ್ಕೆ ಅರ್ಧಗಂಟೆ ತಡವಾಗಿ ಬಂದ ಅಗ್ನಿಶಾಮಕ ದಳದ ಸಿಬ್ಬಂದಿ, ಬೆಂಕಿಯನ್ನು ಸಂಪೂರ್ಣ ನಂದಿಸಿದ್ದು, ಪರಿಸ್ಥಿತಿ ಹತೋಟಿಗೆ ಬಂದಿದೆ.

ಘಟನೆಯಲ್ಲಿ ಬಿಎಂಪಿಯ 8ಕ್ಕೂ ಹೆಚ್ಚು ನೌಕರರಿಗೂ ಸುಟ್ಟು ಗಾಯಗಳಾಗಿದ್ದು, ಅವರನ್ನು ಸೇಂಟ್ ಮಾರ್ಥಾಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ. ಅದೃಷ್ಟವಶಾತ್ ಎಲ್ಲರೂ ಪ್ರಾಣಾಪಾದಿಂದ ಪಾರಾಗಿದ್ದಾರೆ.

ಘಟನಾ ಸ್ಥಳಕ್ಕೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ತುಷಾರ್ ಗಿರಿನಾಥ್ ಅವರು, ಇಂದು ಸಂಜೆ ಸಂಜೆ 5 ರಿಂದ 5.30 ರ ನಡುವೆ ಈ ಘಟನೆ ನಡೆದಿದೆ.

ನಾನು ಕಛೇರಿಯಲ್ಲಿದ್ದೆ, ವಿದ್ಯುತ್ ವ್ಯತ್ಯಯವಾಗಿತ್ತು. ನಂತರ ನಮ್ಮ ಕಚೇರಿಯ ಹಿಂಭಾಗದ ಕಟ್ಟಡದಲ್ಲಿ ಬೆಂಕಿ ಕಾಣಿಸಿಕೊಂಡಿದೆ ಎಂಬುದು ನನಗೆ ತಿಳಿಯಿತು.

ನಾನು ಅಲ್ಲಿಗೆ ಹೋದಾಗ, ಕಟ್ಟಡದಲ್ಲಿ ಭಾರಿ ಬೆಂಕಿ ಹೊತ್ತಿಕೊಂಡಿತ್ತು. ಘಟನೆಯಿಂದ ಅಪಾರ ನಷ್ಟ ಸಂಭವಿಸಿದೆ. ಅಲ್ಲಿ ಕೆಲಸ ಮಾಡುತ್ತಿದ್ದವರು ಗಾಯಗೊಂಡಿದ್ದಾರೆ, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ.

## ಮಣಿಪುರ ಹಿಂಸಾಚಾರ: ವಿಳಂಬ ತನಿಖೆಗೆ ಸುಪ್ರೀಂ ಬೇಸರ

■ ವಿಜಯಸಾಕ್ಷಿ ಸುದ್ದಿ, ಮಣಿಪುರ

ಮಣಿಪುರದ ಹಿಂಸಾಚಾರ ಘಟನೆಗಳ ಕುರಿತಾದ ತನಿಖೆ ವಿಳಂಬವಾಗುತ್ತಿರುವುದಕ್ಕೆ ಸುಪ್ರೀಂ ಕೋರ್ಟ್ ಬೇಸರ ವ್ಯಕ್ತಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್, ನ್ಯಾಯಮೂರ್ತಿಗಳಾದ ಜೆಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರನ್ನೊಳಗೊಂಡ ಪೀಠವು, "ಕೊಲೆ, ಅತ್ಯಾಚಾರ, ಬೆಂಕಿ ಹಚ್ಚುವಿಕೆ ಮತ್ತು ಎಫ್‌ಐಆರ್ ದಾಖಲಿಸದಿರುವುದು ಸೇರಿದಂತೆ ಘೋರ ಅಪರಾಧಗಳನ್ನು ಒಳಗೊಂಡ ಘಟನೆಗಳ ನಡುವೆ ತನಿಖೆಯನ್ನು ವಿಳಂಬ ಮಾಡಲಾಗುತ್ತಿದೆ" ಎನ್ನುವ ಅರ್ಜಿಗಳ ವಿಚಾರಣೆ ನಡೆಸಿದೆ.

ಅಪರಾಧ ನಡೆದಿರುವ ವ್ಯಾಪ್ತಿಯ ಪೊಲೀಸ್ ಠಾಣೆಯಲ್ಲಿ ಸಾಮಾನ್ಯವಾಗಿ ಎಫ್‌ಐಆರ್ ದಾಖಲಿಸಲಾಗುತ್ತದೆ. ಯಾವುದೇ ಪೊಲೀಸ್ ಠಾಣೆಯು ದೂರು ಸ್ವೀಕರಿಸಿದ ಆನಂತರ ಮೊದಲು ಶೂನ್ಯ ಎಫ್‌ಐಆರ್ ದಾಖಲಿಸಬೇಕು. ಆ ಬಳಿಕ ಅದನ್ನು ಸಂಬಂಧಪಟ್ಟ ಠಾಣೆಗೆ ರವಾನಿಸಲು ಅನುಮತಿಸುತ್ತದೆ.

ಶೂನ್ಯ ಎಫ್‌ಐಆರ್‌ಗಳನ್ನು ದಾಖಲಿಸಿದ ಬಳಿಕ ತನಿಖೆಯ ಅಧಿಕಾರ ಹೊಂದಿರುವ ವ್ಯಾಪ್ತಿಯ ಪೊಲೀಸ್ ಠಾಣೆಗಳಿಗೆ ರವಾನಿಸುವಲ್ಲಿ ಗಮನಾರ್ಹ ವಿಳಂಬವಾಗಿದೆ ಎಂದು ನ್ಯಾಯಾಲಯ ಹೇಳಿದೆ.

ಕ್ರಿಮಿನಲ್ ಪ್ರೊಸೀಜರ್ ಕೋಡ್‌ನ ಸೆಕ್ಷನ್ 161 (ಪೊಲೀಸರಿಂದ ಸಾಕ್ಷಿಗಳ ಪರೀಕ್ಷೆ) ಮತ್ತು ಸೆಕ್ಷನ್ 164 (ಮ್ಯಾಜಿಸ್ಟ್ರೇಟ್ ಮುಂದೆ ಮಾಡಿದ ತಪ್ಪೊಪ್ಪಿಗೆಗಳು ಅಥವಾ ಹೇಳಿಕೆಗಳು) ಅಡಿಯಲ್ಲಿ ಸಾಕ್ಷಿಗಳ ಹೇಳಿಕೆಗಳನ್ನು ದಾಖಲಿಸುವಲ್ಲಿ ವಿಳಂಬ ಮತ್ತು "ಶ್ರದ್ಧೆಯ ಕೊರತೆ"ಯನ್ನು ನ್ಯಾಯಾಲಯ ಎತ್ತಿ ತೋರಿಸಿದೆ.

ಲೈಂಗಿಕ ದೌರ್ಜನ್ಯವನ್ನು ತಡೆಗಟ್ಟುವುದು ಮತ್ತು ಸಂತ್ರಸ್ತರನ್ನು ರಕ್ಷಿಸುವುದು ಸರ್ಕಾರದ ಬದ್ಧ ಕರ್ತವ್ಯ ಎಂದು ಪೀಠವು ಗಮನಿಸಿದೆ. "ಮಣಿಪುರದಲ್ಲಿ ನಡೆದ ಹಿಂಸಾಚಾರದಲ್ಲಿ ಮಹಿಳೆಯರು ಲೈಂಗಿಕ ದೌರ್ಜನ್ಯದ ಗಂಭೀರ ಕೃತ್ಯಗಳಿಗೆ ಒಳಗಾದ ರೀತಿ ವಿಚಾರದಲ್ಲಿ ದುಃಖವನ್ನು ವ್ಯಕ್ತಪಡಿಸಬೇಕು.

# ಆ.17ಕ್ಕೆ ಮಿನಿ ಉದ್ಯೋಗ ಮೇಳ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ನವನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ಮಿನಿ ಉದ್ಯೋಗ ಮೇಳವನ್ನು ಆಗಸ್ಟ್ 17 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.

ಮೇಳದಲ್ಲಿ 5 ರಿಂದ 6 ಖಾಸಗಿ ವಲಯದಲ್ಲಿ ಉದ್ಯೋಗದಾತರು ಭಾಗವಹಿಸಿ ತಮ್ಮ ಸಂಸ್ಥೆಯಲ್ಲಿ ವಿವಿಧ ಖಾಲಿ ಹುದ್ದೆಗಳಿಗೆ ಅಭ್ಯರ್ಥಿಗಳ ಸಂದರ್ಶನ ನಡೆಸಲಿದ್ದಾರೆ. 18 ರಿಂದ 35 ವಯೋಮಿತಿ ಹೊಂದಿದ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ, ಹಾಗೂ ಯಾವುದೇ ಪದವಿ ಹೊಂದಿದ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗಬಹುದು. ಮಿನಿ ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು https://surveyheart.com/form/64d0fdb47934e6657d-bff382 ವೆಬ್ ಸೈಟ್ ಮುಖಾಂತರ ನೋಂದಾಯಿಸಿಕೊಳ್ಳಬೇಕು.

ಅಭ್ಯರ್ಥಿಗಳು ತಮ್ಮ ಆಧಾರ ಕಾರ್ಡ್, ಬಯೋಡಾಟಾ (ರೆಸ್ಯೂಮ)ಗಳ ಹೆಚ್ಚಿನ ಪ್ರತಿಗಳೊಂದಿಗೆ (ಕನಿಷ್ಠ 5 ಪ್ರತಿಗಳು) ತಮ್ಮ ಸ್ವಂತ ಖರ್ಚಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕುವೆಂಪು ರಸ್ತೆ ನವನಗರ ಹುಬ್ಬಳ್ಳಿ ಇಲ್ಲಿಗೆ ಹಾಜರಾಗಬೇಕು. ಮಾಹಿತಿಗೆ ದೂರವಾಣಿ ಸಂಖ್ಯೆ 0836-2225288, 9480869880, 8453208555, 8197440155 ಕಚೇರಿ ವೇಳೆಯಲ್ಲಿ ಸಂಪರ್ಕಿಸಬೇಕೆಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ ವಾರ್ತೆ

### ಮುದಕಮ್ಮ ಮೆಕ್ಕಿ



**ಲಕ್ಷ್ಮೇಶ್ವರ:** ಪಟ್ಟಣದ ಸೊಪ್ಪಿನಕೇರಿ ಓಣಿಯ ಹಿರಿಯ ನಿವಾಸಿ ಮುದಕಮ್ಮ ಈರಬಸಪ್ಪ ಮೆಕ್ಕಿ ( 90 ) ಇವರು ಶುಕ್ರವಾರ ರಾತ್ರಿ ನಿಧನ ಹೊಂದಿದರು. ಮೃತರಿಗೆ ಮೂವರು ಪುತ್ರಿಯರು ಸೇರಿ ಅಪಾರ ಬಂಧು ಬಳಗವಿದೆ.

ಶನಿವಾರ ಅಂತ್ಯಕ್ರಿಯೆ ಜರುಗಲಿದೆ.

### ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ವಿದ್ಯಾರ್ಥಿಗಳಿಂದ ಪ್ರತಿಭಟನೆ: ಶಾಸಕ ಡಾ. ಲಮಾಣಿ ಭರವಸೆ

# ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಶೀಘ್ರವೇ ಸ್ಪಂದನೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಗದಗ ವತಿಯಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳು ಶುಕ್ರವಾರ ಶಿರಹಟ್ಟಿ ಪಟ್ಟಣದಲ್ಲಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಲಕಾಲ ಪ್ರತಿಭಟನೆ ನಡೆಸಿ, ಶಾಸಕ ಡಾ. ಚಂದ್ರು ಲಮಾಣಿ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸ್ಥಳಕ್ಕಾಗಮಿಸಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಶಕ್ತಿ ಯೋಜನೆ ಜಾರಿಯಾದಾಗಿನಿಂದ ಒಂದು ಬಸ್‌ನಲ್ಲಿ 100ಕ್ಕೂ ಹೆಚ್ಚು ಜನ ಪ್ರಯಾಣಿಸುತ್ತಿದ್ದಾರೆ. ಶಿರಹಟ್ಟಿಯಲ್ಲಿ ಹೊಸ ಡಿಪೋ ಪ್ರಾರಂಭವಾಗಿದ್ದರೂ ಸಹ ಹೊಸ ಬಸ್ ಇಲ್ಲದೇ ಇರುವುದು ದುರದೃಷ್ಟಕರ. ಗ್ರಾಮೀಣ ಪ್ರದೇಶಗಳಲ್ಲಿ ಇನ್ನೂ ಕೆಲ ರಸ್ತೆಗಳ ಸುಧಾರಣೆ ಆಗಬೇಕಿದೆ. ಅವಶ್ಯವಿದ್ದಲ್ಲಿ ತಾತ್ಕಾಲಿಕ ದುರಸ್ತಿ ಮಾಡಿಸಲಾಗುತ್ತಿದೆ. ಕ್ಷೇತ್ರದ ಕೆಲವೊಂದು ಕಾಲೇಜು ಮತ್ತು ವಸತಿ ನಿಲಯಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತಿದೆ. ಶಿರಹಟ್ಟಿಯ ಪ್ರಥಮ ದರ್ಜೆ ಕಾಲೇಜಿನಲ್ಲಿ ನೀರು ಮತ್ತು ಲೈಬ್ರರಿ ವ್ಯವಸ್ಥೆ ಮಾಡಲಾಗಿದೆ. ಪಿಯು ಕಾಲೇಜಿನ ಕಾಂಪೌಂಡ್ ಸಹ ವ್ಯವಸ್ಥೆ ಮಾಡಲಾಗಿದೆ. ಸಮರ್ಪಕ ಬಸ್ ಓಡಿಸುವಂತೆ ಈಗಾಗಲೇ ಸಂಬಂಧಿಸಿದ ಸಂಸ್ಥೆಯ ಡಿಸಿ ಹಾಗೂ ಎಂಡಿ ಅವರಿಗೂ ಸಹ ಸಂಪರ್ಕಿಸಿದ್ದೇನೆ ಎಂದರು.

ಇದಕ್ಕೂ ಮುನ್ನ, ಶಿರಹಟ್ಟಿ ಬಸ್ ನಿಲ್ದಾಣದ ಹೊರಗಡೆ ರಸ್ತೆ ತಡೆ ನಡೆಸಿ, ಪ್ರತಿಭಟನಾ ಸ್ಥಳಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಆಗಮಿಸಬೇಕೆಂದು ವಿದ್ಯಾರ್ಥಿಗಳು ಪಟ್ಟು ಹಿಡಿದಿದ್ದರು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳೊಂದಿಗೆ ಸಿಪಿಐ ಎಸ್ ಎಂ ಶಿರಗುಪ್ಪಿ, ಪಿಎಸ್‌ಐ ಈರಣ್ಣ ರಿತ್ತಿ, ನಿಮ್ಮ ಸಮಸ್ಯೆಗಳಿಗೆ ನಾವು ಕೂಡಾ ಸ್ಪಂದಿಸುತ್ತೇವೆ.

ಮನವಿಯ ಪ್ರತಿಯನ್ನು ನಮಗೂ ನೀಡಿದರೆ ನಾವು ನಮ್ಮ ಮೇಲಧಿಕಾರಿಗಳ ಮೂಲಕ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸುತ್ತೇವೆಂದು ವಿದ್ಯಾರ್ಥಿಗಳಿಗೆ ಭರವಸೆಯನ್ನು ನೀಡಿದರು.

ಗಿರೀಶ ನರಗುಂದಕರ, ಮಹೇಶ ಲಮಾಣಿ, ಪರ್ವತಗೌಡ ಕಲ್ಲನಗೌಡ್ರ, ಅಭಿಷೇಕ ದೊಡ್ಡಮನಿ, ಯಲ್ಲಪ್ಪ ಆರಟ್ಟಿ, ಮಾಲತೇಶ ಮಣಕವಾಡ, ಚೇತನ ಯಲಿಗಾರ, ಪ್ರದೀಪ ಶೆಟ್ಟರ, ದರ್ಶನ ಅಕ್ಕಿ, ಕಾರ್ತಿಕ ಅಕ್ಕಿ, ಸಿದ್ರಾಮೇಶ ಅಡರಕಟ್ಟಿ, ಪುನೀತ ಬೆನಕನವಾರಿ, ಪ್ರಜ್ವಲ ಓಲೇಕಾರ ಮುಂತಾದವರು ಪ್ರತಿಭಟನೆಯ ನೇತೃತ್ವ ವಹಿಸಿದ್ದರು.

> ವಿದ್ಯಾರ್ಥಿಗಳ ದೈನಂದಿನ ಸಂಚಾರಕ್ಕೆ ಹೆಚ್ಚಿನ ಬಸ್ ಸೌಲಭ್ಯ ಒದಗಿಸಬೇಕು, ಸರಕಾರಿ ಅನುದಾನಿತ ಶಾಲಾ-ಕಾಲೇಜುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಮತ್ತು ತಾಲೂಕಿನಲ್ಲಿ ಇನ್ನೂ ಹೆಚ್ಚಿನ ವಸತಿ ನಿಲಯಗಳನ್ನು ಪ್ರಾರಂಭಿಸಬೇಕು. ಶಕ್ತಿ ಯೋಜನೆಯಿಂದ ಶಿರಹಟ್ಟಿಗೆ ಆಗಮಿಸುವ ಬಸ್ಸುಗಳು ಮಹಿಳೆಯರಿಂದ ಗಿಜಿಗುಡುತ್ತಿದ್ದು, ವಿದ್ಯಾರ್ಥಿಗಳು ಬಸ್‌ನಲ್ಲಿ ಹತ್ತಲು ತೀವ್ರ ಪ್ರಯಾಸ ಪಡುವ ದುಸ್ಥಿತಿಯಿದೆ. ಆದ್ದರಿಂದ ಹೆಚ್ಚಿನ ಬಸ್ಸುಗಳ ವ್ಯವಸ್ಥೆ ಮಾಡುವಂತೆ ವಿದ್ಯಾರ್ಥಿಗಳು ಆಗ್ರಹಿಸಿದರು.

# ಜೀವನ ರೂಪಿಸಿದವರನ್ನು ಮರೆಯಬೇಡಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ತಂದೆ-ತಾಯಿ, ಗುರುಗಳನ್ನು ಎಂದಿಗೂ ಮರೆಯಬಾರದು ಎಂದು ಅಶೋಕ ಸೋನಗೋಜಿ ಹೇಳಿದರು.

ಅವರು ಪಟ್ಟಣದ ಆರ್ ಎನ್ ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ 2022-23ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ, ಎನ್‌ಎಸ್‌ಎಸ್, ರೆಡ್ ಕ್ರಾಸ್, ರೋವರ್ಸ್ ಮತ್ತು ರೇಂಜರ್ಸ್ ಘಟಕಗಳ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.

ಹೆತ್ತ ತಂದೆ-ತಾಯಿಗಳನ್ನು, ವಿದ್ಯೆ ನೀಡಿದ ಗುರುಗಳನ್ನು ಎಂದೂ ಮರೆಯಬಾರದು. ತಂದೆ- ತಾಯಿಗಳು ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿರುತ್ತಾರೆ. ಅದೇ ರೀತಿ ಗುರುಗಳು ನಿಮ್ಮ ಭವಿಷ್ಯದಲ್ಲಿ ಉತ್ತಮ ಪ್ರಜೆಗಳನ್ನಾಗಿ ರೂಪಿಸಲು ಹಗಲಿರುಳು ಶ್ರಮಿಸುತ್ತಾರೆ. ಇಂತಹ ಮಹನೀಯರನ್ನು ಎಂದೆಂದಿಗೂ ಮರೆಯಬಾರದು ಎಂದರು.

ಆರ್ ಆರ್ ಪಟ್ಟಣ ಮಾತನಾಡಿ, ಮಕ್ಕಳು ಪ್ರಾಥಮಿಕ ಹಾಗೂ ಪ್ರೌಢಶಾಲೆಯ ನಂತರ ಪದವಿ ಶಿಕ್ಷಣದಲ್ಲಿ ಕ್ರೀಡೆ, ಸಾಂಸ್ಕೃತಿಕ, ಎನ್‌ಎಸ್‌ಎಸ್‌ನಂತಹ ಹತ್ತು ಹಲವು ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗಲು ಸಹಾಯಕವಾಗುತ್ತದೆ. ಇದರಿಂದ ಮುಂದಿನ ಭವಿಷ್ಯಕ್ಕೆ ಸಹಕಾರಿಯಾಗಲಿದ್ದು, ಅವುಗಳನ್ನು ನಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಎನ್ ಆರ್ ದೇಶಪಾಂಡೆ ಮಾತನಾಡಿ, ಆಧುನಿಕತೆ ಬೆಳೆದಂತೆ ಮೊಬೈಲ್ ಬಳಕೆ ಹೆಚ್ಚಿದ್ದು, ಅದರಲ್ಲಿ ಸಿಗುವ ಉತ್ತಮ ಸಂದೇಶಗಳನ್ನು ಮಾತ್ರ ಪಡೆದುಕೊಳ್ಳಬೇಕೇ ಹೊರತು, ಜೀವನಕ್ಕೆ ಅನಗತ್ಯವಾದ ವಿಷಯಗಳನ್ನು ಸ್ವೀಕರಿಸಬೇಡಿ ಎಂದರು.

ಈ ಸಂದರ್ಭದಲ್ಲಿ ಸಾಧನೆಗೈದ ಮಹನೀಯರನ್ನು, ಸಾಧಕ ವಿದ್ಯಾರ್ಥಿಗಳನ್ನು ಗೌರವಿಸಿ ಸನ್ಮಾನಿಸಲಾಯಿತು. ಅಧ್ಯಕ್ಷತೆಯನ್ನು ಕಾಲೇಜು ಪ್ರಾಂಶುಪಾಲರಾದ ಅನುಪಮಾ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ನಾಗರಾಜ ದೇಶಪಾಂಡೆ, ಎಸ್ ಸಿ ಬಡ್ನಿ, ಅಶೋಕ ಸೋನಗೋಜಿ ಪಾಲ್ಗೊಂಡಿದ್ದರು. ಆರ್ ಆರ್ ಪಟ್ಟಣ, ಪದ್ಮಾವತಿ ವಿ, ಪ್ರಸನ್ನ ಎಸ್, ನೇತ್ರಾವತಿ ಕೆ ವಿ, ಗಿರೀಶ ಎಂ, ಗೀತಾಂಜಲಿ ಆರ್, ಜಾನಕಿ ಮರಾಠೆ, ಭಾರತಿ ಆರ್ ಎನ್ ಹಾಗೂ ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ಶ್ರದ್ಧಾ ಕೇಂದ್ರಗಳು ಪರಿಶುದ್ಧವಾಗರಲಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶ್ರದ್ಧಾಕೇಂದ್ರಗಳು ಸ್ವಚ್ಛವಾಗಿ ಇದ್ದಾಗ ಮಾತ್ರ ಪರಿಶುದ್ಧವಾದ ಭಕ್ತಿ ಮೂಡಿ, ಮನಃಶಾಂತಿ ಲಭ್ಯವಾಗುತ್ತದೆ ಎಂದು ಧ. ಗ್ರಾ. ಯೋಜನೆಯ ಮುಳಗುಂದ ಮೇಲ್ವಿಚಾರಕಿ ರೇಣುಕಾ ಹೇಳಿದರು.

ಅವರು ಪಟ್ಟಣದ ಮಸೀದಿ ಹಾಗೂ ದೇವಸ್ಥಾನಗಳ ಸ್ವಚ್ಛತಾ ಕಾರ್ಯಕ್ರಮದಲ್ಲಿ ಮಾತನಾಡಿ, ಪಟ್ಟಣದ ಮಸೀದಿ, ಮಂದಿರ, ದೇವಸ್ಥಾನಗಳನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವುದರಿಂದ ಶ್ರದ್ಧಾಕೇಂದ್ರಗಳಲ್ಲಿ ಭಕ್ತಿ-ಭಾವ ಹೆಚ್ಚುವುದರ ಜೊತೆಗೆ, ಭಕ್ತರಲ್ಲಿ ಜ್ಞಾನ ಹೆಚ್ಚಿಸಲು ಸಹಕಾರಿಯಾಗುತ್ತದೆ ಎಂದರು. ಯೋಜನೆಯ ಸೇವಾ ಪ್ರತಿನಿಧಿಗಳಾದ ದಾವಲಬಿ ಕಿಲ್ಲೇದಾರ, ಅಕ್ಕಮ್ಮಾ ನೀಲಗುಂದ, ರೇಷ್ಮಾ ಲಾಡಸಾಬನವರ, ಜೀನತಮ್ಮಾ ಲಾಡಸಾಬನವರ, ಮುಕ್ತುಮಸಾಬ ಕರ್ನೂಲ, ಸಿಕಂದರ ಡಾಲಾಯತ, ರಾಜೇಸಾಬ ಡಾಲಾಯತ, ಮರಿವೀರಪ್ಪಾ ಸ್ಯಾಲಧರ, ಖಾದರಸಾಬ ಡಾಲಾಯತ, ಮುಸ್ತಾಪಾ ಡಾಲಾಯತ, ಸೈನಾಬಿ ಭದ್ರಾಪೂರ, ಬುಡ್ಡಮಾ ದುರ್ಗಿಗುಡಿ, ನಾಜಮಾ ದಲೀಲ, ಹಮೀದ ದುರ್ಗಿಗುಡಿ, ಶಕೀಲಾ ಲಾಡಸಾಬನವರ, ಲಕ್ಷ್ಮೀ ಗುಲಗಂಜಿ, ಲತಾ ಹಾಳಕೇರಿ ಮುಂತಾದವರಿದ್ದರು.

# ಸ್ವಾತಂತ್ರ್ಯೋತ್ಸವ ನಿಮಿತ್ತ ಭಾಷಣ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸ್ಕೂಲ್ ಚಂದನದಲ್ಲಿ ಶುಕ್ರವಾರ 76ನೇ ಸ್ವಾತಂತ್ರೋತ್ಸವದ ನಿಮಿತ್ತ 'ಭಾರತದ ಸ್ವಾತಂತ್ರ ಹೋರಾಟದಲ್ಲಿ ಕರ್ನಾಟಕದ ಹೆಜ್ಜೆ ಗುರುತುಗಳು' ಎಂಬ ವಿಷಯದ ಕುರಿತು ಭಾಷಣ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.



ಪಟ್ಟಣದ 16 ಪ್ರೌಢಶಾಲೆಗಳ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮವನ್ನು ತಹಸೀಲ್ದಾರ ಕೆ ಆನಂದಶೀಲ ಉದ್ಘಾಟಿಸಿ ಮಾತನಾಡಿ, ಸ್ವಾತಂತ್ರ ಹೋರಾಟದಲ್ಲಿ ಕರ್ನಾಟಕದ ಅನೇಕ ಹೋರಾಟಗಾರು ತಮ್ಮ ಹೆಸರನ್ನು ಚಿರಸ್ಥಾಯಿಯಾಗಿ ಉಳಿಸಿದ್ದಾರೆ. ಅನೇಕ ಮಹನೀಯರ ತ್ಯಾಗ-ಬಲಿದಾನಗಳ ಪ್ರತೀಕವಾಗಿ ಸ್ವಾತಂತ್ರ್ಯ ಲಭಿಸಿದೆ. ಅದರ ಮಹತ್ವವನ್ನು ಎಲ್ಲರೂ ಅರಿತುಕೊಂಡು ಮಹನೀಯರ ತ್ಯಾಗ-ಬಲಿದಾನಗಳ ಬಗ್ಗೆ ತಿಳಿದುಕೊಂಡು, ಅವರ ದೇಶಪ್ರೇಮವನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಸಂಘಟಕರಾದ ಬಿಆರ್‌ಪಿ ಈಶ್ವರ ಮೆಡ್ಲೇರಿ ಮಾತನಾಡಿದರು. ಮಂಜುನಾಥ ಬಡ್ಡಿವಾಡ ಹಾಗೂ ವಾಸುದೇವ ಮಡ್ಲಿ ನಿರ್ಣಾಯಕರಾಗಿದ್ದರು. ಸಿಆರ್‌ಪಿ ಸತೀಶ ಬೋಮಲೆ, ಉಮೇಶ ನೇಕಾರ, ಎನ್ ಎ ಮುಲ್ಲಾ ನಿರೂಪಿಸಿದರು. 16 ಪ್ರೌಢಶಾಲೆಗಳ ವಿದ್ಯಾರ್ಥಿಗಳು, ಶಿಕ್ಷಕರು, ಚಂದನ ಶಾಲೆಯ ನಿರ್ದೇಶಕರು, ಪ್ರಾಂಶುಪಾಲರು, ಸಿಬ್ಬಂದಿವರ್ಗದವರು ಭಾಗವಹಿಸಿದ್ದರು.

ಸ್ಪರ್ಧೆಯಲ್ಲಿ ದಿ ಯೂನಿಕ್ ಆಂಗ್ಲ ಮಾಧ್ಯಮ ಶಾಲೆಯ ರಕ್ಷಿತಾ ಸಂಗನಪೇಟ(ಪ್ರಥಮ), ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯ ನಂದಿನಿ ಬಳಿಗಾರ(ದ್ವಿತೀಯ), ಸೆವೆಂಥ್ ಡೇ ಆಂಗ್ಲ ಮಾಧ್ಯಮ ಶಾಲೆಯ ನಯನಾ ಕುಂದಗೋಳ(ತೃತೀಯ) ಸ್ಥಾನ ಪಡೆದರು.

# ಹಿರಿಯ ನಟಿ ಜಯಪ್ರದಾಗೆ 6 ತಿಂಗಳು ಜೈಲುಶಿಕ್ಷೆ!

■ವಿಜಯಸಾಕ್ಷಿ ಸುದ್ದಿ, ಚೆನ್ನೈ

ಹಿರಿಯ ನಟಿ ಜಯಪ್ರದಾ ಸಂಕಷ್ಟಕ್ಕೆ ಸಿಲುಕಿದ್ದಾರೆ. ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಚೆನ್ನೈನ ಎಗ್ಮೋರ್ ನ್ಯಾಯಾಲಯ ನಟಿ ಜಯಪ್ರದಾಗೆ ಆರು ತಿಂಗಳ ಕಾಲ ಜೈಲು ಶಿಕ್ಷೆ ವಿಧಿಸಿದೆ. ನಟಿ ಜಯಪ್ರದಾ ವಿರುದ್ಧ ಸರ್ಕಾರದ ಲೇಬರ್ ಇನ್ಶುರೆನ್ಸ್ ಕಾರ್ಪೋರೇಷನ್ ನ್ಯಾಯಾಲಯದಲ್ಲಿ ದೂರನ್ನು ದಾಖಲಿಸಿತ್ತು. ಈ ಸಂಬಂಧ ಜಯಪ್ರದಾಗೆ 6 ತಿಂಗಳ ಜೈಲು ಶಿಕ್ಷೆಯಾಗಿದೆ.

ಪ್ರಕರಣದ ವಿಚಾರಣೆಗೆ ಗೈರಾಗಿದ್ದ ಜಯಪ್ರದಾ

ಜಯಪ್ರದಾ ದಕ್ಷಿಣ ಭಾರತದ ಬಹುತೇಕ ಎಲ್ಲಾ ಭಾಷೆಗಳಲ್ಲಿ ನಟಿಸಿರೋ ಜನಪ್ರಿಯ ನಟಿ. ಅಲ್ಲದೆ ರಾಜಕೀಯದಲ್ಲೂ ಸಕ್ರಿಯರಾಗಿರುವ ಇವರಿಗೆ ಸಂಕಷ್ಟ ಎದುರಾಗಿದೆ. ನ್ಯಾಯಾಲಯದ ಪ್ರಕರಣದಲ್ಲಿ ಜಯಪ್ರದಾಗೆ ಸೋಲು ಎದುರಾಗಿದ್ದು, ನ್ಯಾಯಾಲಯ 6 ತಿಂಗಳ ಜೈಲು ಶಿಕ್ಷೆ ವಿಧಿಸಿದೆ.

ಲೋಕಸಭೆ ಚುನಾವಣೆ ಸ್ಪರ್ಧಿಸಿದ್ದ ಜಯಪ್ರದಾ

ನಟಿ ಜಯಪ್ರದಾ ಚೆನ್ನೈನಲ್ಲಿ ಎರಡು ಥಿಯೇಟರ್‌ಗಳನ್ನು ನಡೆಸುತ್ತಿದ್ದಾರೆ. ಈ ಎರಡೂ ಚಿತ್ರಮಂದಿರಗಳ ಮೇಲೆ ಈಗಾಗಲೇ ಕೇಸ್ ದಾಖಲಾಗಿದೆ.

ಅಲ್ಲದೆ ಆಸ್ತಿ ತೆರಿಗೆ ಪಾವತಿಸದ ಹಿನ್ನೆಲೆಯಲ್ಲಿ ಜಪ್ತಿ ಮಾಡಲಾಗಿದೆ. ಇದೇ ವೇಳೆ ಚಿತ್ರಮಂದಿರದ ವ್ಯವಸ್ಥಾಪಕ ಮಂಡಳಿ ಥಿಯೇಟರ್‌ನಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಂದ ಇಎಸ್‌ಐ ಸಲುವಾಗಿ ಹಣವನ್ನು ಕಟ್ ಮಾಡಿಕೊಳ್ಳುತ್ತಿದೆ. ಆದರೆ, ಈ ಹಣವನ್ನು ರಾಜ್ಯ ಕಾರ್ಮಿಕ ವಿಮೆ ಇಲಾಖೆಗೆ ಸರಿಯಾಗಿ ಪಾವತಿ ಮಾಡುತ್ತಿಲ್ಲ.

ಈ ಸಂಬಂಧ ಸರ್ಕಾರದ ರಾಜ್ಯ ಕಾರ್ಮಿಕರ ಇಲಾಖೆ ಜಯಪ್ರದಾ ವಿರುದ್ಧ ದೂರನ್ನು ದಾಖಲಿಸಿತ್ತು.ಈ ಕೇಸ್‌ಗೆ ಸಂಬಂಧಿಸಿದಂತೆ ನಟಿ ಹಾಗೂ ಚಿತ್ರಮಂದಿರ ಮಾಲೀಕರಾಗಿರುವ ನಟಿ ಜಯಪ್ರದಾ ವಿರುದ್ಧ ಚೆನ್ನೈನ ಎಗ್ಮೋರ್ ನ್ಯಾಯಾಲಯ 6 ತಿಂಗಳ ಜೈಲು ಶಿಕ್ಷೆಯನ್ನು ವಿಧಿಸಿದೆ.

### ಗಂಗೆ ಈ ಬಾರಿಯೂ ದಯೆ ತೋರಿದ್ದಾಳೆ- ಸಚಿವ ಶರಣಬಸಪ್ಪಗೌಡ ದರ್ಶನಾಪೂರ

# ನಾರಾಯಣಪುರದ ಬಸವಸಾಗರ ಜಲಾಶಯಕ್ಕೆ ಬಾಗಿನ ಅರ್ಪಣೆ

■ವಿಜಯಸಾಕ್ಷಿ ಸುದ್ದಿ, ಯಾದಗಿರಿ

ಈ ಬಾರಿಯೂ ಗಂಗೆ ನಮ್ಮೆಲ್ಲರ ಮೇಲೆ ದಯೆ ತೋರಿ ರೈತರಲ್ಲಿ ಮತ್ತು ಜನರಲ್ಲಿ ಆತಂಕವನ್ನು ದೂರ ಮಾಡಿದ್ದಾಳೆ ಎಂದು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪಗೌಡ ದರ್ಶನಾಪೂರ ಅಭಿಪ್ರಾಯಪಟ್ಟರು.



ನಾರಾಯಣಪುರದ ಬಸವಸಾಗರ ಜಲಾಶಯ ಭರ್ತಿಯಾದ ಹಿನ್ನೆಲೆಯಲ್ಲಿ ಶುಕ್ರವಾರ ವಿಶೇಷ ಪೂಜೆ ಸಲ್ಲಿಸಿ ಬಾಗಿನ ಅರ್ಪಿಸಿ ಅವರು ಮಾತನಾಡಿದರು

ಮುಂಗಾರು ಆರಂಭದಲ್ಲಿ ವರುಣ ದೇವ ನಿರಾಸೆ ಮೂಡಿಸಿದ್ದರಿಂದ ರೈತರು ಆತಂಕದಲ್ಲಿದ್ದರು. ಈ ಬಾರಿ ಡ್ಯಾಂ ಭರ್ತಿ ಆಗದಿದ್ರೆ ಬೆಳೆ ಬೆಳೆಯಲಾಗದ ಮತ್ತು ಕುಡಿಯಲು ನೀರು ಇಲ್ಲದೆ ಇರುವ ಆತಂಕವಿತ್ತು. ಆರಂಭದಲ್ಲಿ ಮುಂಗಾರು ಕೈಕೊಟ್ಟರೂ ಕಡೆಯಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ಡ್ಯಾಂ ಭರ್ತಿಯತ್ತ ಸಾಗಿದೆ ಎಂದು ಸಚಿವರು ನುಡಿದರು.

ಜಲಾಶಯ ಭರ್ತಿಯಾಗುತ್ತದೆ-ಯೋ ಇಲ್ಲವೋ ಎಂಬ ಆತಂಕ ಎದುರಾಗಿತ್ತು. ಆದರೆ ಈಗ ಸತತ ಒಳಹರಿವು ಹೆಚ್ಚಳವಾಗಿದ್ದರಿಂದ ಜಲಾಶಯ ಭರ್ತಿಯ ಬಗ್ಗೆ ಇದ್ದ ಆತಂಕ ಈಗ ಸರಿದಿದೆ. ಕುಡಿಯುವ ನೀರಿಗಾಗಿ, ರೈತರ ಜಮೀನುಗಳಿಗೆ ನೀರಾವರಿಗಾಗಿ ನೀರನ್ನು ಕಾಲುವೆಗಳ ಮೂಲಕ ಹರಿಸುವುದನ್ನು ಆರಂಭಿಸಲಾಗಿದೆ ಎಂದು ಸಚಿವರು ನುಡಿದರು.

ನಾರಾಯಣಪುರ ಜಲಾಶಯದಿಂದ ಜುಲೈ 22 ರಿಂದ ಒಳ ಹರಿವು ಪ್ರಾರಂಭವಾಗಿದ್ದು, ಇದುವರೆಗೆ 71.50 ಟಿ ಎಮ್ ಸಿ ನೀರನ್ನು ಕೃಷ್ಣಾ ನದಿಗೆ ಹರಿಬಿಡಲಾಗಿದೆ ಎಂದು ಸಚಿವರು ತಿಳಿಸಿದರು.

ಸಚಿವರು ನಂತರ ಜಿಲ್ಲೆಗೆ ಕುಡಿಯುವ ನೀರು ಸರಬರಾಜು ಮಾಡಲು ಜಲಜೀವನ್ ಮೀಷನ್ ಯೋಜನೆಯಡಿ ನಡೆಯುತ್ತಿರುವ ಜಾಕ್ವೆಲ್ ಕಾಮಗಾರಿ ಪರಿಶೀಲಿಸಿ, ಶೀಘ್ರ ಕಾಮಗಾರಿ ಪೂರ್ಣಗೊಳಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಇದೇ ಸಂದರ್ಭದಲ್ಲಿ ಬೂದಿಹಾಳ ಪೀರಾಪುರ ಯೋಜನೆ ವಿಸ್ತರಣಾ ಕಾಮಗಾರಿ ಪರಿಶೀಲಿಸಿ, ಬರುವ ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಲು ಸೂಚಿಸಿದರು.

ಈ ಸಂದರ್ಭದಲ್ಲಿ ಸುರಪುರ ಶಾಸಕ ರಾಜಾ ವೆಂಕಟಪ್ಪನಾಯಕ, ಯಾದಗಿರಿ ಶಾಸಕ ಚೆನ್ನಾರೆಡ್ಡಿಪಾಟೀಲ್ ತುನ್ನೂರು, ಜಿಲ್ಲಾಧಿಕಾರಿ ಡಾ.ಸುಶೀಲಾ ಬಿ, ಹುಣಸಗಿ, ಕೆ.ಬಿ.ಜೆ.ಎನ್.ಎಲ್, ಮುಖ್ಯ ಅಭಿಯಂತರರಾದ ಆರ್. ಮಂಜುನಾಥ, ಕಾರ್ಯ ನಿರ್ವಾಹಕ ಅಭಿಯಂತರರಾದ ಪ್ರಕಾಶ ಮುದಗಲ್, ತಹಸೀಲ್ದಾರ ಬಸವಲಿಂಗಪ್ಪ ನಾಯ್ಕೋಡಿ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

### ಲಯನ್ಸ್ ಕ್ಲಬ್‌ನ 'ವಿಶ್ವ ಸ್ತನ್ಯಪಾನ ಜಾಗೃತಿ ಕಾರ್ಯಕ್ರಮ'ದಲ್ಲಿ ಡಾ. ಸುನೀತಾ

# ತಾಯಿಯ ಎದೆಹಾಲು ಅಮೃತಕ್ಕೆ ಸಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ತಾಯಿಯ ಎದೆಹಾಲು ಅಮೃತಕ್ಕೆ ಸಮಾನವಾಗಿದ್ದು, ಮಗು ಜನಿಸಿದ ಕೂಡಲೇ ಅಮೃತದಂತಹ ತಾಯಿಯ ಹಾಲನ್ನು ಉಣಿಸಬೇಕೆಂದು ಗದುಗಿನ ಸ್ತ್ರೀರೋಗ ತಜ್ಞೆ ಡಾ. ಸುನೀತಾ ಕುರಡಗಿ ಹೇಳಿದರು.



ಅವರು ಗುರುವಾರ ನಗರದ ಆಶ್ರಯ ಆಸ್ಪತ್ರೆಯ ಆವರಣದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಹಾಗೂ ಆಶ್ರಯ ಆಸ್ಪತ್ರೆಯ ಸಹಯೋಗದಲ್ಲಿ ಏರ್ಪಡಿಸಿದ್ದ ಸ್ತನ್ಯಪಾನ ಮಹತ್ವ ಜಾಗೃತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು. ತಾಯಂದಿರು ಗರ್ಭವತಿಯರಿದ್ದಾಗ ಪೌಷ್ಠಿಕಾಂಶವುಳ್ಳ ಆಹಾರವನ್ನು ಸೇವಿಸಬೇಕು. ಇದರಿಂದ ಆರೋಗ್ಯವಂತ ಮಗು ಜನಿಸುವದು. ಶಿಶುವಿನ ಲಾಲನೆ-ಪಾಲನೆ ಮಾಡುವಲ್ಲಿ ತಾಯಂದಿರು ಹೆಚ್ಚಿನ ಮುತುವರ್ಜಿ ವಹಿಸಿ, ಮಗುವಿನ ಬೆಳವಣಿಗೆಗೆ ಪೂರಕವಾಗಬೇಕು ಎಂದರು.

ಮುಖ್ಯ ಅತಿಥಿ ಡಾ. ಜಯರಾಜ ಪಾಟೀಲ ಮಾತನಾಡಿ, ತಾಯಂದಿರು ತಾಯಿಯ ಹಾಲಿನ ಮಹತ್ವ ತಿಳಿದು ಕ್ರಮಬದ್ಧವಾಗಿ ಮಕ್ಕಳಿಗೆ ಉಣಿಸಬೇಕು. ಇದರಿಂದ ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚುತ್ತದೆ ಎಂದರು.

ಗದಗ-ಬೆಟಗೇರಿ ಲಯನ್ ಲೇಡಿ ಕ್ಲಬ್ ಅಧ್ಯಕ್ಷೆ ಸಾವಿತ್ರಿ ಶಿಗ್ಲಿ ಮಾತನಾಡಿ, ಪೌಷ್ಠಿಕ ಅಂಶಗಳ ಹೂರಣವೇ ತಾಯಿಯ ಎದೆಹಾಲು. ಇದಕ್ಕೆ ಸಮಾನವಾದದ್ದು ಯಾವುದೂ ಇಲ್ಲ. ಅದಕ್ಕಾಗಿ ತಾಯಂದಿರು ಮಗುವಿಗೆ ಎದೆಹಾಲನ್ನು ಉಣಿಸುವ ಮೂಲಕ ಆಕಸ್ಮಿಕವಾಗಿ ಬರುವ ಮಾರಣಾಂತಿಕ ಕಾಯಿಲೆಗಳಿಂದ ಮಗುವನ್ನು ರಕ್ಷಿಸಬಹುದು ಎಂದರು.

ಲಯನ್ ಲೇಡಿ ಕ್ಲಬ್ ಕಾರ್ಯದರ್ಶಿ ಅಮೃತಾ ವಾರಕರ, ಖಜಾಂಚಿ ಸುರೇಖಾ ಮಲ್ಲಾಡದ, ವೀಣಾ ಸುಲಾಖೆ, ತುಳಸಿ ಪಟೇಲ್, ರೂಪಾ ಮಿಸ್ಕಿನ್, ಅನುರಾಧ ಸಾಲಿ, ಗೀತಾ ಶಿಗ್ಲಿ, ವಿಜಯಲಕ್ಷ್ಮೀ, ಸಪ್ನಾ ಮಿಸ್ಕಿನ್, ದೀಪ್ತಿ ಭಾಂಡಗೆ, ರಶ್ಮಿ ದೇಸಾಯಿ, ಲಯನ್ಸ್ ಕ್ಲಬ್ ಅಧ್ಯಕ್ಷ ರಮೇಶ ಶಿಗ್ಲಿ, ಕಾರ್ಯದರ್ಶಿ ಪ್ರವೀಣ ವಾರಕರ, ಖಜಾಂಚಿ ರಾಜು ಮಲ್ಲಾಡದ, ಅಶ್ವಥ್ ಸುಲಾಖೆ, ನಿತೀಶ್ ಸಾಲಿ, ರತನ್ ದೇಸಾಯಿ ಮುಂತಾದವರು ಪಾಲ್ಗೊಂಡಿದ್ದರು.

# ಕಾಶಿ ಯಾತ್ರೆ ಸಹಾಯಧನ ಹೆಚ್ಚಳ ಸ್ವಾಗತಾರ್ಹ

■ವಿಜಯಸಾಕ್ಷಿ ಸುದ್ದಿ, ಗದಗ



ಕಾಶಿ ದರ್ಶನಕ್ಕೆ ತೆರಳುವ ಕರ್ನಾಟಕದ ಯಾತ್ರಾರ್ಥಿಗಳಿಗೆ ಹಿಂದಿನ ಬಿಜೆಪಿ ಸರ್ಕಾರ 5 ಸಾವಿರ ರೂ. ಧನಸಹಾಯ ಮಾಡುತ್ತಿತ್ತು. ಪ್ರಸ್ತುತ, ಕಾಂಗ್ರೆಸ್ ಸರ್ಕಾರ ಹಾಗೂ ಮುಜರಾಯಿ ಖಾತೆ ಸಚಿವರು ಅದನ್ನು 7,500ರೂ.ಗಳಿಗೆ ಏರಿಕೆ ಮಾಡಿದ್ದು ಅಭಿನಂದನೀಯ ಎಂದು ಕಾಂಗ್ರೆಸ್ ಯುವ ಮುಖಂಡ ಮೋಹನ ದೊಡಕುಂಡಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾಂಗ್ರೆಸ್ ಸರಕಾರ ಎಂದೂ ಜಾತಿ ಹಾಗೂ ಸಿದ್ಧಾಂತದ ಆಧಾರದಲ್ಲಿ ತಾರತಮ್ಯ ಮಾಡುವುದಿಲ್ಲ ಎಂಬುದು ಈ ನಿರ್ಣಯದಿಂದ ಮತ್ತೆ ಸಾಬೀತಾಗಿದೆ. ಸಾರಿಗೆ ಹಾಗೂ ಮುಜರಾಯಿ ಖಾತೆ ಸಚಿವ ರಾಮಲಿಂಗಾರೆಡ್ಡಿ ಕಾಶಿ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಮಹತ್ವದ ನಿರ್ಣಯ ಕೈಗೊಂಡಿದ್ದು, ಉತ್ತರ ಪ್ರದೇಶದ ಮುಖ್ಯಮಂತ್ರಿಗಳಿಗೆ ಯಾತ್ರಾರ್ಥಿಗಳ ವಸತಿಗಾಗಿ ವಸತಿ ಸಮುಚ್ಚಯ ನಿರ್ಮಿಸುವಂತೆ ಮನವಿ ಮಾಡಿರುವುದಾಗಿ ಘೋಷಿಸಿದ್ದಾರೆ. ಕಾಶಿ ದರ್ಶನ ಯಾತ್ರೆಯಲ್ಲಿ ಬಿಹಾರದ ಗಯಾ ಕ್ಷೇತ್ರವನ್ನೂ ಕಾಂಗ್ರೆಸ್ ಸರ್ಕಾರ ಸೇರಿಸಿದೆ. ರೈಲಿನಲ್ಲಿ ಎಲ್‌ಎಚ್ ಕೋಚ್‌ಗಳನ್ನು ಅಳವಡಿಸಲಾಗಿದ್ದು, ಯಾತ್ರಾರ್ಥಿಗಳ ಜೊತೆಗೆ ಇಬ್ಬರು ನುರಿತ ವೈದ್ಯರ ವ್ಯವಸ್ಥೆಯನ್ನೂ ಮಾಡಲಾಗಿದೆ. ಇದು ಕಾಶಿಯಾತ್ರೆಗೆ ತೆರಳುವ ಯಾತ್ರಾರ್ಥಿಗಳಿಗೆ ವರದಾನವಾಗಿದೆ ಎಂದಿದ್ದಾರೆ.

# ಕ್ಷತ್ರಿಯ ಮಹಾಸಭಾಕ್ಕೆ ಅವಿರೋಧ ಆಯ್ಕೆ





■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ಭಾವಸಾರ ಕ್ಷತ್ರಿಯ ಮಹಾಸಭಾದ ಗದಗ ಮತ್ತು ಬಿಜಾಪೂರದ ವಲಯ ಅಧ್ಯಕ್ಷರಾಗಿ ಅಶ್ವಥ್ ಎ ಸುಲಾಖೆ ಹಾಗೂ ಗದಗ ಜಿಲ್ಲಾ ಅಧ್ಯಕ್ಷರಾಗಿ ವೆಂಕಟೇಶ ಟಿ ಮಹೇಂದ್ರಕರ ನೇಮಕಗೊಂಡಿದ್ದಾರೆ.

ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ಮಹಾಸಭಾದ ಕರ್ನಾಟಕ ಕಾರ್ಯಕಾರಿ ಸಭೆಯಲ್ಲಿ ಇವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಮಹಾಸಭಾದ ಪ್ರಕಟಣೆ ತಿಳಿಸಿದೆ.

# ಮೋದಿ ಸರಕಾರದಿಂದ ಚುನಾವಣಾ ಆಯೋಗದ ನಿಯಂತ್ರಣಕ್ಕೆ ಪ್ರಯತ್ನ:ಕಾಂಗ್ರೆಸ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮುಂಬರುವ ಚುನಾವಣೆಯನ್ನು ಗುರಿಯಾಗಿಸಿ ಮೋದಿ ಸರಕಾರ ಚುನಾವಣಾ ಆಯೋಗವನ್ನು ನಿಯಂತ್ರಣಕ್ಕೆ ಪ್ರಯತ್ನಿಸುತ್ತದೆ ಎಂದು ಕಾಂಗ್ರೆಸ್ ಆರೋಪಿಸಿದೆ.

ಮುಖ್ಯ ಚುನಾವಣಾ ಆಯುಕ್ತ ಮತ್ತು ಚುನಾವಣಾ ಆಯುಕ್ತರ ಆಯ್ಕೆ ಸಮಿತಿಯಿಂದ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಅವರನ್ನು (ಸಿಜೆಐ) ಹೊರಗೆ ಇರಿಸುವ ಉದ್ದೇಶದ ಮಸೂದೆಯನ್ನು ಕೇಂದ್ರ ಸರ್ಕಾರವು ರಾಜ್ಯಸಭೆಯಲ್ಲಿ ಗುರುವಾರ ಮಂಡಿಸಿದೆ.

ಸಿಜೆಐ ಬದಲಿಗೆ ಸಂಪುಟ ದರ್ಜೆಯ ಸಚಿವರೊಬ್ಬರು ಸಮಿತಿಯ ಸದಸ್ಯರಾಗಲಿದ್ದಾರೆ.ಇದರಿಂದಾಗಿ ಸರ್ಕಾರಕ್ಕೆ ನೇಮಕಾತಿಯಲ್ಲಿ ಹೆಚ್ಚಿನ ಅಧಿಕಾರ ದೊರೆಯಲಿದೆ.

2012ರ ಜೂನ್‌ನಲ್ಲಿ ಬಿಜೆಪಿಯ ಹಿರಿಯ ನಾಯಕ ಎಲ್‌ಕೆ ಅಡ್ವಾಣಿ ಅಂದಿನ ಪ್ರಧಾನಿ ಮನಮೋಹನ್ ಸಿಂಗ್ ಅವರಿಗೆ ಬರೆದ ಪತ್ರವನ್ನು ಹಂಚಿಕೊಂಡ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್, ಸಾಂವಿಧಾನಿಕ ಸಂಸ್ಥೆಗಳ ನೇಮಕಾತಿಯಲ್ಲಿ ಪಕ್ಷಪಾತ ತಪ್ಪಿಸಲು ದ್ವಿಪಕ್ಷೀಯ ರೀತಿಯಲ್ಲಿ ನೇಮಕಾತಿ ನಡೆಯಬೇಕು ಎಂದು ಹೇಳಿರುವುದನ್ನು ನೆನಪಿಸಿದ್ದಾರೆ.

ಆಯ್ಕೆ ಸಮಿತಿಯಲ್ಲಿ ಪ್ರಧಾನ ಮಂತ್ರಿ ಮಾತ್ರವಲ್ಲದೆ ಸಿಜೆಐ ಮತ್ತು ಉಭಯ ಸದನಗಳ ವಿರೋಧ ಪಕ್ಷದ ನಾಯಕರೂ ಇರಬೇಕು ಎಂಬ ಪ್ರಸ್ತಾವನೆಯನ್ನು ಅಡ್ವಾಣಿ ಅವರು ಹಿಂದೆಯೇ ಪ್ರಸ್ತಾಪಿಸಿದ್ದರು ಎಂದು ಉಲ್ಲೇಖಿಸಿದ್ದಾರೆ.

### 'ಜನ ಜಾಗೃತಿ ಧರ್ಮ ಸಮಾವೇಶ'ದ ಸಾನ್ನಿಧ್ಯ ವಹಿಸಿದ ಶ್ರೀ ರಂಭಾಪುರಿ ಜಗದ್ಗುರುಗಳ ನುಡಿ

# ಮನುಷ್ಯ ಜೀವನವನ್ನು ಶುದ್ಧಗೊಳಿಸುವುದೇ ಧರ್ಮದ ಗುರಿ

■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಮಾನವೀಯ ಸಂಬಂಧಗಳು ಸಡಿಲಗೊಳ್ಳುತ್ತಿರುವ ಇಂದಿನ ದಿನಗಳಲ್ಲಿ, ಧರ್ಮ ಸಂಸ್ಕೃತಿಯ ಅರಿವು ಅವಶ್ಯಕ. ಮನುಷ್ಯ ಜೀವನವನ್ನು ಸುಂದರ, ಶುದ್ಧಗೊಳಿಸುವುದೇ ಧರ್ಮದ ಮೂಲ ಗುರಿಯಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



'ಶ್ರೀ ಪೀಠದ ದಾಖಲೆ ಸಂಪುಟ-3' ಬಿಡುಗಡೆ ಮಾಡಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಇಂದಿನ ವೈಚಾರಿಕ ಜಗದಲ್ಲಿ ಧರ್ಮ ಸಂಸ್ಕೃತಿಯ ಉಳಿವು ಮತ್ತು ಬೆಳವಣಿಗೆಗಾಗಿ ಶ್ರಮಿಸುವ ಅಗತ್ಯವಿದೆ. ವೀರಶೈವ ಧರ್ಮದ ವಿಚಾರ ಧಾರೆಗಳು ಮನುಕುಲದ ಶ್ರೇಯಸ್ಸಿಗೆ ದಾರಿದೀಪವಾಗಿವೆ ಎಂದರು.

ಅವರು ಗುರುವಾರ ನಗರದ ಶ್ರೀಮದಭಿನವ ರೇಣುಕ ಮಂದಿರ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಮಂಗಲ ಭವನದಲ್ಲಿ 2ನೇ ದಿನದ ಜನ ಜಾಗೃತಿ ಧರ್ಮ ಸಮಾವೇಶದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬಾಳಿನ ಭಾಗ್ಯೋದಯ-ಕ್ಕೆ ಧರ್ಮದ ಬೆಳಕು ಬೇಕು. ಸಮರ ಜೀವನವನ್ನು ಅಮರ ಜೀವನಕ್ಕೆ ಕೊಂಡೊಯ್ಯುವುದೇ ನಿಜವಾದ ಧರ್ಮ. ಸತ್ಯ ಮತ್ತು ಪ್ರಾಮಾಣಿಕತೆಗಿಂತ ಮಿಗಿಲಾದ ಧರ್ಮ ಬೇರೊಂದಿಲ್ಲ. ಸತ್ಯವೇ ಒಂದು ಧರ್ಮ. ಇದು ಧರ್ಮವನ್ನು ರಕ್ಷಿಸುವ ರಕ್ಷಾಕವಚ. ಧರ್ಮದ ರಕ್ಷಾಕವಚ ನಾಶಗೊಂಡರೆ ಜಗದಲ್ಲಿ ಯಾವುದೂ ಉಳಿಯದು. ಪರಿಶುದ್ಧವಾದ ಮತ್ತು ಪವಿತ್ರವಾದ ಜೀವನ ರೂಪಿತಗೊಳ್ಳಲು ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರೂಪಿಸಿದ ತತ್ವ ಸಿದ್ಧಾಂತಗಳ ಅರಿವು ಆಚರಣೆ ಮುಖ್ಯವಾಗಿದೆ. ಈ ದಿಶೆಯಲ್ಲಿ ಸರ್ವರೂ ಅರಿತು ಬಾಳಿದರೆ ಮಾನವ ಜೀವನ ಸಾರ್ಥಕಗೊಳ್ಳುವುದೆಂದರು.

ಸಹಕಾರಿ ಕ್ಷೇತ್ರದಲ್ಲಿ ಅಮೂಲ್ಯ ಸೇವೆ ಸಲ್ಲಿಸಿದ ಎನ್.ಎ.ಮುರುಗೇಶ ಆರಾಧ್ಯರಿಗೆ 'ಸಹಕಾರಿ ಸೇವಾ ಭೂಷಣ' ಪ್ರಶಸ್ತಿಯಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ಮಾಜಿ ಸಚಿವ ಎಸ್ ಎ ರವೀಂದ್ರನಾಥ, ಡಾ. ಎ ಹೆಚ್ ಶಿವಯೋಗಿಸ್ವಾಮಿ, ಯಶವಂತರಾವ್ ಜಾಧವ್, ಡಾ. ನವೀನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಮತ್ತು ಹರಪನಹಳ್ಳಿ ತೆಗ್ಗಿನಮಠದ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಧರ್ಮದ ದಿಕ್ಸೂಚಿ ಇಲ್ಲದೇ ಹೋದರೆ ಬದುಕಿಗೆ ಅರ್ಥವೇ ಇಲ್ಲ. ಧರ್ಮ ದರ್ಶನಗಳ ಅರಿವಿಗಾಗಿ ಸಂಸ್ಕೃತಿ ಜ್ಞಾನ ಅಗತ್ಯವಾಗಿದೆ ಎಂದರು.

ನಂದಿತಾವರೆ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಮೊದಲ್ಗೊಂಡು ಹಲವಾರು ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ಜರುಗಿತು. ಸ್ವಾಗಿ ಶಾಂತಕುಮಾರ ಸ್ವಾಗತಿಸಿದರು. ಜಯಪ್ರಕಾಶ ಮಾಗಿ ಜಗದ್ಗುರುಗಳಿಗೆ ಗೌರವ ಮಾಲಾರ್ಪಣೆ ಸಲ್ಲಿಸಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಹರಿಹರದ ಕಾಂತರಾಜ ಮತ್ತು ವೀರೇಶ ಬಡಿಗೇರ ಸಂಗೀತ ಸೇವೆ ಸಲ್ಲಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka